# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಕ್ರೋಧದಿಂದ ಬುದ್ಧಿ ದುರ್ಬಲವಾಗುತ್ತದೆ..
ಲೋಭದಿಂದ ಸಂಸ್ಕಾರ ದೂರವಾಗುತ್ತದೆ..
ಮೋಹ ಮರ್ಯಾದೆಯನ್ನು ಕೆಡಿಸುತ್ತದೆ..
ಮದ ಜ್ಞಾನವನ್ನು ನುಂಗಿ ಹಾಕುತ್ತದೆ..
ಮಾತ್ಸರ್ಯ ಅಭಿವೃದ್ಧಿಗೆ ಮಾರಕವಾಗುತ್ತದೆ..
ಲಂಚ ಗೌರವವನ್ನು ಹಾಳು ಮಾಡುತ್ತದೆ..
ಚಿಂತೆ ಆಯುಷ್ಯವನ್ನು ಕ್ಷೀಣಿಸುತ್ತದೆ..
ಇದ್ಯಾವುದು ಇಲ್ಲದೇ ಜೀವನ ನಡೆಸಿದರೆ..
ಮಾನವನಾಗಿ ಜನಿಸಿದ್ದು ಸಾರ್ಥಕವಾಗುತ್ತದೆ..

**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 13-06-2025 to 19-06-2025 ಬೆಲೆ: 7-00 ಸಂಪುಟ–4 ಸಂಚಿಕೆ–51 ಪುಟಗಳು–6








ಅಹಮದಾಬಾದ್‌ನಂದ ಲಂಡನ್ ಗ್ಯಾಟ್ವಿಕ್‌ಗೆ ತೆರಳುತ್ತಿದ್ದ ಎಐ171 ವಿಮಾನ ಟೇಕ್ ಆಫ್ ಆದ ನಂತರ ಕೆಲವೇ ಕ್ಷಣಗಳಲ್ಲಿ ಅಪಘಾತಕ್ಕೀಡಾಗಿದೆ ಎಂದು ಏರ್ ಇಂಡಿಯಾ ದೃಢಪಡಿಸಿದೆ. ವಿಮಾನದಲ್ಲಿ 242 ಪ್ರಯಾಣಿಕರು ಮತ್ತು ಸಿಬ್ಬಂದಿ ಇದ್ದು, ಈ ಪೈಕಿ 169 ಭಾರತೀಯ ಪ್ರಜೆಗಳು, 53 ಬ್ರಿಟಿಷ್ ಪ್ರಜೆಗಳು, 1 ಕೆನಡಾ ಪ್ರಜೆ ಮತ್ತು 7 ಪೋರ್ಚುಗೀಸ್ ಪ್ರಜೆ ವಿಮಾನದಲ್ಲಿದ್ದರು. ಅದರೊಂದಿಗೆ ವಿಮಾನವು ಬಿಜೆ ಆಸ್ಪತ್ರೆಯ ಹಾಸ್ಟೆಲ್ ಕಟ್ಟಡದ ಮೇಲೆ ಬಿದ್ದು, ಸ್ಫೋಟಗೊಂಡಿರುವ ಕಾರಣ ವಿದ್ಯಾರ್ಥಿಗಳು ಮರಣ ಹೊಂದಿರುವ ಸಾಧ್ಯತೆ ಹೆಚ್ಚಾಗಿದೆ.

## ಪ್ರಚೋದನಕಾರಿ ಹೇಳಿಕೆಗೆ ಅವಕಾಶ ನೀಡಬಾರದು –ಖಾದರ್



**ಮಂಗಳೂರು:** ಮಂಗಳೂರಿನಲ್ಲಿ ಇತ್ತೀಚಿಗೆ ನಡೆದ ಘಟನೆಗಳು ಬೇಸರದ ವಿಚಾರವಾಗಿದೆ. ಇದು ಜಿಲ್ಲೆಯ ಸೌಹಾರ್ದತೆಗೆ ಒಂದು ಕಪ್ಪು ಚುಕ್ಕೆ. ನಮ್ಮ ಗುರಿ ಜಿಲ್ಲೆಯಲ್ಲಿ ಸೌಹಾರ್ದತೆ ಮೂಡಿಸುವಂತಾಗಿರಬೇಕು. ಭಿನ್ನಾಭಿಪ್ರಾಯ ಇರಬಾರದು ಎಂದಿಲ್ಲ. ಅದನ್ನು ಮಾತುಕತೆ ಮೂಲಕ ಬಗೆ ಹರಿಸಬೇಕು. ಇಲ್ಲಿ ಕೇವಲ ಜನಪ್ರತಿನಿಧಿಗಳ ಜವಾಬ್ಧಾರಿ ಮಾತ್ರ ಅಲ್ಲ ಪ್ರತಿಯೊಬ್ಬರ ಜವಾಬ್ದಾರಿ ಕೂಡಾ ಇದೆ. ಜನಪ್ರತಿನಿಧಿಗಳು ಆಡುವ ಮಾತು ಸಮಾಜದ ಒಗ್ಗಟ್ಟಿಗಾಗಿ ಇರಬೇಕೇ ಹೊರತು ಸಮಾಜ ಒಡೆಯಲು ಅಲ್ಲ. ಯಾವುದೇ ಧರ್ಮ ಕೂಡ ಮನುಷ್ಯನ ಮನಸ್ಸಿಗೆ ಮತ್ತು ದೇಹಕ್ಕೆ ಗಾಯ **3ನೇ ಪುಟಕ್ಕೆ**



## ನನ್ನನ್ನು ಕಂಡರೆ ಸರ್ಕಾರಕ್ಕೆ ಭಯ –ಸೂಲಿಬೆಲೆ

**ಬೆಂಗಳೂರು:** ನನ್ನ ಮೇಲೆ ಒಂದೇ ಒಂದು ಕೋಮುದ್ವೇಷದ ಪ್ರಕರಣವಿಲ್ಲ. ಆರ್‌ಸಿಬಿ ಕಾಲ್ತುಳಿತವನ್ನು ಮರೆಸಲು ಜನರ ಮೂಡ್ ಡೈವರ್ಟ್ ಮಾಡಲು ಸರ್ಕಾರ ನನ್ನ ಮೇಲೆ ಪ್ರಕರಣ ದಾಖಲಿಸುವ ಕೆಲಸ ಮಾಡುತ್ತಿದೆ. ಸಿದ್ದರಾಮಯ್ಯ ಸರಕಾರಕ್ಕೆ ನನ್ನನ್ನು ಕಂಡರೆ ಭಯ ಎಂದು ಚಿಂತಕ ಚಕ್ರವರ್ತಿ ಸೂಲಿಬೆಲೆ ಹೇಳಿದ್ದಾರೆ. ಕಾಂಗ್ರೆಸ್‌ಗೆ ಇದೊಂದು ಚಾಳಿಯಾಗಿದ್ದು, ಇದು ಹೊಸದೇನು ಅಲ್ಲ. ಸಿದ್ದರಾಮಯ್ಯ ಸರ್ಕಾರ ಹೆದರಿಕೊಂಡಿದ್ದು ಜಿಲ್ಲೆಗಳಿಗೆ ಹೋಗದಂತೆ ನಿರ್ಬಂಧ ಮಾಡಿ ಗೂಂಡಾ ಕಾಯ್ದೆ ಹಾಕಲು **3ನೇ ಪುಟಕ್ಕೆ**



## ಜಾತಿ ಗಣತಿಯಲ್ಲಿ ರಾಜಕೀಯ ಬೇಡ –ಡಿ.ಕೆ.ಶಿ

**ಬೆಂಗಳೂರು:** ನಮಗೆ ಜಾತಿ ಗಣತಿಯಲ್ಲಿ ರಾಜಕೀಯ ಬಣ್ಣ ಬೇಡ. ಸಾಮಾಜಿಕ ನ್ಯಾಯ ಬೇಕು. ಈ ಕಾರಣಕ್ಕೆ ನಾವು ಮತ್ತೊಮ್ಮೆ ಜಾತಿ ಜನಗಣತಿ ಮಾಡಲು ತೀರ್ಮಾನ ಮಾಡಿದ್ದೇವೆ. ಈ ಹಿಂದಿನ ವರದಿ ಬಗ್ಗೆ ಟೀಕೆ ಮಾಡಿದ್ದ ವಿರೋಧ ಪಕ್ಷದವರು ಈಗ ಉಲ್ಟಾ ಮಾತಾಡುತ್ತಿದ್ದಾರೆ. ಅದರ ಬದಲು ಹಳೆಯದನ್ನೇ ಒಪ್ಪಿಕೊಳ್ಳುವಂತೆ ಆಗ್ರಹಿಸಲಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದ್ದಾರೆ. ವಿಧಾನಸೌಧದಲ್ಲಿ ಸಚಿವ ಸಂಪುಟ ಸಭೆಯ ನಂತರ ಮಾಧ್ಯಮಗಳ ಜೊತೆ ಮಾತನಾಡಿ, ಜಾತಿಗಣತಿ ವಿಚಾರವಾಗಿ ಮರು ಸಮೀಕ್ಷೆಗೆ **3ನೇ ಪುಟಕ್ಕೆ**











# ಸಂಪ್ರದಾಯ

## ದಸರಾ ಗೊಂಬೆ




ನವರಾತ್ರಿ ಪ್ರಮುಖ ಆಕರ್ಷಣೆ ದಸರಾ ಬೊಂಬೆ. ದಸರಾ ಗೊಂಬೆ ಕೂರಿಸುವ ಪದ್ಧತಿ 18ನೇ ಶತಮಾನದಿಂದ ಮನೆಮನೆಯಲ್ಲೂ ಜಾರಿಗೆ ಬಂದಿತು ಎನ್ನಬಹುದು. ದಸರಾ ಹಬ್ಬದಲ್ಲಿ ಮನೆ ಮನೆಗಳಲ್ಲಿ ಗೊಂಬೆಗಳನ್ನು ಕೂರಿಸುವ ಪದ್ಧತಿಯು ಮೈಸೂರು ಪ್ರಾಂತ್ಯದಲ್ಲಿ ಮೊಟ್ಟಮೊದಲು ಆರಂಭವಾಯಿತು ಎನ್ನಲಾಗುತ್ತದೆ. ಜಗತ್ ಪ್ರಸಿದ್ಧಿ ಪಡೆದಿರುವ ಮೈಸೂರು ದಸರಾ ಆಚರಣೆ ಮೈಸೂರು ಅರಮನೆಯಲ್ಲಿ ನಡೆದರೆ, ಮೈಸೂರು ರಾಜರ ಪ್ರಜೆಗಳೆಲ್ಲರ ಮನೆಯಲ್ಲಿ ಹಬ್ಬದ ಸಂಭ್ರಮವಾಗಿ ಪಟ್ಟದ ಗೊಂಬೆಗಳನ್ನು ಇಟ್ಟು ಪೂಜಿಸುವ ಪದ್ಧತಿ ಬೆಳೆದುಕೊಂಡು ಬಂತು. ನಮ್ಮ ದೇಶದ ಪೌರಾಣಿಕ ಹಿನ್ನೆಲೆ, ಕಲೆ, ಸಂಪ್ರದಾಯ, ಜನ ಜೀವನವನ್ನು ದಸರಾ ಬೊಂಬೆಗಳು ಸಾರುತ್ತದೆ. ಮನೆಗಳಲ್ಲಿ ಗೊಂಬೆ ಕೂರಿಸುವಾಗ 3,5,7,9 ಹಂತಗಳಲ್ಲಿ ಕೂರಿಸುತ್ತಾರೆ. ಗೊಂಬೆಗಳನ್ನು ಕೂರಿಸಲು ಮರದ ಸ್ಟ್ಯಾಂಡ್‌ಗಳನ್ನೂ ಬಳಸುತ್ತಾರೆ. ಮೊದಲ ಅಂತಸ್ತಿನಲ್ಲಿ ಪಟ್ಟದ ಬೊಂಬೆ, ಕಲಶ, ಗಣಪತಿ, ಮನೆ ದೇವರು, ದೀಪಗಳು ಇವುಗಳನ್ನಿಟ್ಟು, ಎರಡು, ಮೂರು ಉಳಿದ ಅಂತಸ್ತುಗಳಲ್ಲಿ ಇತರ ಬೊಂಬೆಗಳನ್ನು ಜೋಡಿಸುತ್ತಾರೆ. ಇದರಲ್ಲಿ ಮುಖ್ಯವಾಗಿ ಅಷ್ಟ ಲಕ್ಷ್ಮಿಯರು, ದಶಾವತಾರದ ಬೊಂಬೆಗಳು, ಸೀತಾ ಕಲ್ಯಾಣದ ಜೋಡಿಗಳು, ವೈಕುಂಠ ಪ್ರದರ್ಶನದ ಬೊಂಬೆಗಳು, ಶಿವ-ಪಾರ್ವತಿಯರ ಕೈಲಾಸದ ಸೆಟ್ ಹೀಗೆ ಒಂದೊಂದು ಅಂತಸ್ತಿನಲ್ಲಿ ಒಂದೊಂದನ್ನು ಇಟ್ಟು ಅಲಂಕರಿಸುವುದು. ಹಾಗೆಯೇ ಗುರು ಪರಂಪರೆಯ ಎಲ್ಲಾ ಗುರುಗಳನ್ನು ಒಂದು ವಿಭಾಗದಲ್ಲಿ, ಚಾಮುಡೇಶ್ವರಿ ಹಬ್ಬದಲ್ಲಿ ಚಾಮುಂಡೇಶ್ವರಿಯ ವಿಶೇಷತೆಯಿರುವುದರಿಂದ ಆ ದೇವಿಯ ವಿಗ್ರಹವನ್ನು ಮಧ್ಯದಲ್ಲಿರಿಸಿ ಸರಸ್ವತಿ, ಗೌರಿ, ಲಕ್ಷ್ಮಿಯರ ವಿಗ್ರಹಗಳನ್ನಿಟ್ಟು ಪೂಜಿಸುತ್ತಾರೆ. ಗೊಂಬೆ ಕೂರಿಸುವವರು ಪ್ರತೀ ವರ್ಷ ಹಳೆಯ ಗೊಂಬೆಯ ಜೊತೆಗೆ ಒಂದು ಜೋಡಿ ಹೊಸ ಗೊಂಬೆಯನ್ನು ಸೇರಿಸಿ ಗೊಂಬೆ ಕೂರಿಸಬೇಕು ಎನ್ನುವುದು ಹಿಂದಿನಿಂದಲೂ ನಡೆದುಕೊಂಡು ಬಂದಿರುವ ವಾಡಿಕೆ.

# ಸಂಪಾದಕೀಯ

ಕರಾವಳಿ ತರಂಗಿಣಿ

## ನಂಬಿ ಕೆಟ್ಟವರಿಲ್ಲವೋ ಆ ರಂಗಯ್ಯನಾ...

– ಲಲಿತಶ್ರೀ ಪ್ರೀತಮ್ ರೈ



ದೇವರೆಲ್ಲಿದ್ದಾನೆ? ದೇವರು ಇದ್ದಾನೆಯೇ? ಹಾಗಿದ್ದರೆ ಅವನೇಕೆ ನಮಗೆ ಕಾಣ ಸಿಗುತ್ತಿಲ್ಲ? ಹೌದಲ್ಲ ದೇವರು ಇರುವುದೇ ಆದರೆ ಒಮ್ಮೆಯಾದರೂ, ಒಬ್ಬರಿಗಾದರೂ ಕಾಣಿಸಬೇಕಿತ್ತಲ್ಲ, ಯಾರಿಗೆಲ್ಲಾ ಸಿಕ್ಕಿರಬಹುದು? ಇಂತಹ ತಲೆ ಬುಡ ಇಲ್ಲದ ಪ್ರಶ್ನೆಗಳು ನನ್ನನ್ನು ಕಾಡುವುದುಂಟು. ಅಮ್ಮ ಇದ್ದಾಗ ಆಗಾಗ ಅಮ್ಮನ ತಲೆಗೂ ಹುಳ ಬಿಡಲು ಪ್ರಯತ್ನಿಸುತ್ತಿದ್ದೆ, ಆದರೆ ಅವರಿಗೆಲ್ಲಿ ನಾನು ಬಿಟ್ಟ ಹುಳ ತಲೆ ಕೊರೆಯಲು ಸಾಧ್ಯ. ಮೂರೊತ್ತು ದೇವರನ್ನು ನೆನೆಯುವ ಅವರು ಆಗಾಗ ಹೇಳುತ್ತಿದ್ದುದ್ದು "ನಂಬಿಕೆಯೇ ದೇವರು" ದೇವರಿದ್ದಾನೆ ಅಂತ ನಂಬಿ ಮುಂದೆ ಹೋಗು. ಇಷ್ಟೆಲ್ಲಾ ಮಾತನಾಡುವ ನನಗೆ ದೇವರಲ್ಲಿ ನಂಬಿಕೆ ಇಲ್ಲ ಎನ್ನುವ ನಿರ್ಧಾರಕ್ಕೆ ಬಂದು ಬಿಡಬೇಡಿ. ನನ್ನಲ್ಲೂ ನಮ್ಮಮ್ಮ, ನನ್ನ ಅಣ್ಣ ಆಸ್ತಿಕತೆಯ ಬೀಜ ಬಿತ್ತಿದ್ದಾರೆ. ಮೂರೊತ್ತು ಅಲ್ಲದಿದ್ದರೂ ಒಂದೊತ್ತಾದರೂ ದೇವರನ್ನು ಕಣ್ಣುಮುಚ್ಚಿ ನಮಿಸುವಷ್ಟು ನಂಬಿಕೆ ನನ್ನಲ್ಲಿದೆ. ನಂಬಿ ಕೆಟ್ಟವರಿಲ್ಲವೋ... ರಂಗಯ್ಯನಾ ಎಂಬ ದಾಸವಾಣಿಯಂತೆ. ಈ ಭೂಮಿಯ ಮೇಲೆ ಹುಟ್ಟಿದ ಪ್ರತಿಯೊಂದು ಜೀವಿಯಲ್ಲೂ ಒಂದಲ್ಲ ಒಂದು ರೀತಿಯಲ್ಲಿ ನಂಬಿಕೆ ಅನ್ನುವುದು ಇದ್ದೇ ಇದೆ. ಇನ್ನು ಮನುಷ್ಯರಾದ ನಮ್ಮ ಜೀವನ ನಿಂತಿರುವುದೇ ನಂಬಿಕೆಯ ಮೇಲೆ. ಮನುಷ್ಯ ಸಂಘ ಜೀವಿ, ನಂಬಿಕೆ ಇರುವುದರಿಂದ ಮಾತ್ರ ಒಬ್ಬರನ್ನೊಬ್ಬರು ಅನುಸರಿಸಿಕೊಂಡು ಬಾಳುವುದು ಸಾಧ್ಯ. ಮನುಷ್ಯ ಭೂಮಿ ಮೇಲೆ ಬರುತ್ತಿದ್ದಂತೆ ಮೊದಲು ಆವರಿಸಿಕೊಳ್ಳೋ ಗುಣವೇ ಈ ನಂಬಿಕೆ, ಇದು ಪ್ರೀತಿಯ ತಳಹದಿಯೂ ಹೌದು. ಹುಟ್ಟುತ್ತಾ ಮಗು ಅಳುತ್ತದೆ, ತಾಯಿ ಎದೆಹಾಲು ಕುಡಿಸುತ್ತಾಳೆ. ಕರುಳುಬಳ್ಳಿಯ ಸಂಬಂಧ ಮಗು ತಾಯಿಯನ್ನು ಗುರುತಿಸಬಲ್ಲದು, ಆದರೆ ತಂದೆ?, ತಾಯಿ ನಿನ್ನ ತಂದೆ ಎಂದು ತೋರಿಸಿದಾಗ ಮಗು ಆತನನ್ನು ತಂದೆ ಎಂದು ಒಪ್ಪಿಕೊಳ್ಳುತ್ತದೆ, ಇದಕ್ಕೆ ಕಾರಣ ಮಗು ತಾಯಿಯ ಮೇಲೆ ಇಟ್ಟಿರುವ ನಂಬಿಕೆ. ಈ ಜಗತ್ತಿನಲ್ಲಿ ಯಾವ ಮಕ್ಕಳು ತಮ್ಮ ತಾಯಿಯನ್ನು ಕೇಳಿಲ್ಲ "ನನ್ನ ಹುಟ್ಟಿಗೆ ಕಾರಣ ಇವನೇ ಅಂತ ಹೇಗೆ ನಂಬಲಿ" ಅಂತ. ಇದಕ್ಕೆ ಕಾರಣ ಆಗಲೇ ಹೇಳಿದ ಹಾಗೆ ಮಕ್ಕಳು ತಾಯಿಯ ಮೇಲಿಟ್ಟಿರುವ ಸ್ವಾಭಾವಿಕ ನಂಬಿಕೆ ಮತ್ತು ಆಕೆಯ ಮೇಲಿನ ಪ್ರೀತಿ. ಪ್ರೌಢರಾಗಿ ಯೋಚನೆ ಮಾಡಿದಾಗ ನಮಗೆ ದೇವರ ಅಸ್ತಿತ್ವದ ಪ್ರಶ್ನೆ ಎದುರಾಗುತ್ತದೆ. ನಾಸ್ತಿಕ ಮತ್ತು ಆಸ್ತಿಕ ವಾದಗಳು ಬಹುಶಃ ನಾಗರೀಕತೆಯ ಆಧುನೀಕರಣದ ದಿನದಿಂದಲೇ ಶುರುವಾಗಿರಬಹುದು. ದೇವರಿಲ್ಲ ಎನ್ನುವುದೇ ನಾಸ್ತಿಕರ ನಂಬಿಕೆ, ದೇವರಿದ್ದಾನೆ ಅನ್ನೋ ಅಚಲ ನಂಬಿಕೆ ಆಸ್ತಿಕರದ್ದು, ಹಾಗೆಂದು ಇದನ್ನು ಅಲ್ಲಗೆಳೆಯಲು ಸಾಧ್ಯವಿಲ್ಲ. ಪ್ರಕೃತಿಯಲ್ಲಿಯೇ ದೇವರ ಅಸ್ತಿತ್ವವನ್ನು ಕಂಡವರು ನಮ್ಮ ಹಿರಿಯರು. ಪ್ರಕೃತಿಯಲ್ಲಿರುವ ಕಲ್ಲು ಮಣ್ಣನ್ನೇ ಪೂಜಿಸಿರುವ ಅವರ ಈ ನಂಬಿಕೆಗಳೇ ಅವರಿಗೆ ದೇವರು. ಯಾವುದೇ ನಂಬಿಕೆಯನ್ನು ವಿರೋಧಿಸುವ ಅಥವಾ ಇದೇ ಸರಿ ಅಂತ ಇನ್ನೊಬ್ಬರ ಮೇಲೆ ಹೇರುವ ಅಧಿಕಾರ ಯಾರಿಗೂ ಇಲ್ಲ. ನಂಬಿಕೆ ಎನ್ನುವುದು ಎಲ್ಲಾ ಸಂಬಂಧದಲ್ಲೂ ಅಡಿಪಾಯವಾಗಿರುತ್ತದೆ. ಅಡಿಪಾಯ ಗಟ್ಟಿಯಿಲ್ಲದಿದ್ದರೆ ಒಂದು ಕಟ್ಟಡ ನಿಲ್ಲಲು ಹೇಗೆ ಸಾಧ್ಯ ಇಲ್ಲವೋ ಹಾಗೆ ಸಂಬಂಧದಲ್ಲಿ ನಂಬಿಕೆ ಇಲ್ಲದಿದ್ದರೆ ಯಾವ ಸಂಬಂಧಗಳೂ ಉಳಿಯಲಾರದು. ಪೋಷಕರು-ಮಕ್ಕಳ, ಸಹೋದರ-ಸಹೋದರಿ, ಗುರು-ಶಿಷ್ಯ, ಗಂಡ- ಹೆಂಡತಿ, ಸ್ನೇಹಿತರು ಎಲ್ಲವೂ ನಂಬಿಕೆಯ ಮೇಲೆ ನಿಂತಿರುತ್ತವೆ. ಯುವಕ-ಯುವತಿಯರಿಗೆ ಪ್ರೀತಿಯ ನಂಬಿಕೆ. ಆಸ್ತಿಕರಿಗೆ ದೇವರ ಮೇಲೆ, ನಾಸ್ತಿಕರಿಗೆ ಎಲ್ಲವೂ ಮಿಥ್ಯ ಎಂಬ ನಂಬಿಕೆ, ಹೀಗೇ ನಂಬಿಕೆಗಳು ನಮ್ಮನ್ನು ಕಾಯುತ್ತವೆ ಹಾಗೂ ಬೆಳೆಸುತ್ತವೆ. ಮಹಾಭಾರತದಲ್ಲಿ ಅರ್ಜುನ ಕೌರವ ಸಮೂಹವನ್ನು ಎದುರಿಸಿದ್ದು ತನ್ನ ತೋಳ್ಬಲದಿಂದ ಅಂತ ಎನ್ನುವುದಕ್ಕಿಂತ ಹೆಚ್ಚಾಗಿ ಕೃಷ್ಣ ತನ್ನ ಜತೆಗಿದ್ದಾನೆ ಎಂಬ ನಂಬಿಕೆಯಿಂದ. ನಂಬಿಕೆ ಉತ್ಸಾಹ ಹುಟ್ಟಿಸುವುದರೊಂದಿಗೆ ಒಂದು ಸಕಾರಾತ್ಮಕ, ಪರಿಶುದ್ಧ ನಂಬಿಕೆ ಬದುಕನ್ನು ಸುಂದರವಾಗಿ ರೂಪಿಸುವುದರಲ್ಲಿ ಎರಡು ಮಾತಿಲ್ಲ. ನಂಬಿಕೆ ಕಷ್ಟಗಳನ್ನು ಕಡಿಮೆ ಮಾಡದಿದ್ದರೂ, ಕಷ್ಟಗಳನ್ನು ಎದುರಿಸುವ ಶಕ್ತಿ ಕೊಡುವುದರಲ್ಲಿ ಸಂಶಯವಿಲ್ಲ. ಸುತ್ತಲಿರುವ ಜನರ ಒಳ್ಳೆಯತನದಲ್ಲಿ ನಂಬಿಕೆಯ ಜೊತೆಗೆ ಪ್ರಪಂಚದಲ್ಲಿ ಒಳ್ಳೆಯ ಜನರಿದ್ದಾರೆ ಎಂಬ ನಂಬಿಕೆ ಇರಬೇಕು. ಇಲ್ಲದಿದ್ದರೆ ಈ ಸಮಾಜದಲ್ಲಿ ಬೆರೆಯಲು ಸಾಧ್ಯವಿಲ್ಲ. ನಂಬಿಕೆಯ ಮೇಲೆ ನಂಬಿಕೆಯಿಡಬೇಕು, ಆಗ ಮಾತ್ರ ನಮ್ಮ ಬದುಕು ಹಸನಾಗಲು ಸಾಧ್ಯ ಎನ್ನುವುದನ್ನು ಮನಗಂಡು ಮುಂದುವರಿಯೋಣ....

# ವೈದ್ಯೋನಾರಾಯಣೋ ಹರಿಃ

## ಬೂದು ಕುಂಬಳ




ಭಾರತದ ಪ್ರತಿ ಭಾಗದಲ್ಲಿ ಉಪಯೋಗವಾಗುವ ತರಕಾರಿಗಳಲ್ಲಿ ಕುಂಬಳಕಾಯಿ ಎಲ್ಲರಿಗೂ ಪರಿಚಿತವಾಗಿರುವ ತರಕಾರಿ. ಇದನ್ನು ಹುಳಿ, ಪಲ್ಯ ಮತ್ತು ಸಿಹಿತಿಂಡಿಗಳಲ್ಲಿ ಉಪಯೋಗಿಸುತ್ತಾರೆ. ಕುಂಬಳಕಾಯಿ ರುಚಿಕರವಾದ ತರಕಾರಿ ಮಾತ್ರವಲ್ಲದೆ ಮನುಷ್ಯನಿಗೆ ಪುಷ್ಟಿಕರವಾದ ಆಹಾರಾಂಶಗಳನ್ನೂ ಒಳಗೊಂಡಿದೆ. ನೂರು ಗ್ರಾಂ ಕುಂಬಳ ಕಾಯಿಯಲ್ಲಿರುವ ಆಹಾರ ಅಂಶಗಳಲ್ಲಿ ತೇವಾಂಶ 92.6 ಗ್ರಾಂ, ಕಾರ್ಬೋಹೈಡ್ರೇಟ್ 4.6 ಗ್ರಾಂ, ವಿಟಮಿನ್‌ಗಳು 1.4 ಗ್ರಾಂ, ಕೊಬ್ಬು 0.1 ಗ್ರಾಂ, ಲವಣ 0.6 ಗ್ರಾಂ, ನಾರು 0.7 ಗ್ರಾಂ ಅಲ್ಲದೆ ಶಕ್ತಿ 25 ಕೆಲೋರಿಗಳು, ಮೆಗ್ನೀಸಿಯಂ 14 ಮಿಗ್ರಾಂ, ರಂಜಕ 30 ಮಿಗ್ರಾಂ, ಕಬ್ಬಿಣ 0.7 ಮಿಗ್ರಾಂ, ಸೋಡಿಯಮ್ 5.6 ಮಿ ಗ್ರಾಂ, ಪೊಟ್ಯಾಶಿಯಂ 139.0 ಮಿಗ್ರಾಂ, ತಾಮ್ರ 0.20 ಮಿಗ್ರಾಂ, ಗಂಧಕ 1.6 ಮಿ ಗ್ರಾಂ, ಕ್ಲೋರಿನ್ 4.0 ಮಿಗ್ರಾಂ, ಥಯಾಮಿನ್ 0.06 ಮಿಗ್ರಾಂ, ರಿಬೋ ಫ್ಲೇವಿನ್ 0.04 ಮಿಗ್ರಾಂ, ನಿಕೋಟಿನಿಕ್ ಆಮ್ಲ 0.5 ಮಿಗ್ರಾಂ, ಸಿ ವಿಟಮಿನ್ 2.0 ಮಿಗ್ರಾಂ ಇದೆ. ಅಷ್ಟೇ ಅಲ್ಲದೆ ಇದನ್ನು ಆಯುರ್ವೇದದಲ್ಲಿಯೂ ಬಳಸಲಾಗುತ್ತದೆ. ಕೆಲವು ಕಡೆಗಳಲ್ಲಿ ದೃಷ್ಟಿ ನಿವಾಳಿಸಲು ಉಪಯೋಗಿಸುತ್ತಾರೆ. ಅಷ್ಟೇ ಅಲ್ಲದೆ ಪೂಜೆಗಳಲ್ಲಿಯೂ ಬಳಕೆಯಲ್ಲಿದೆ. ಬೂದುಗುಂಬಳದ ಬೀಜಗಳಿಗೆ ಜಂತುಹುಳು ನಾಶಕ ಗುಣವಿದೆ. ಕುಂಭಳಕಾಯಿ ಬಹಳ ಪುಷ್ಟಿದಾಯಕದೊಂದಿಗೆ ಮೂತ್ರೋತ್ತೇಜಕವಾಗಿದೆ. ಕಾಯಿಯಿಂದ ಅದೇ ತಾನೇ ತೆಗೆದ ರಸವನ್ನು ಅಂತರ್ ರಕ್ತಸ್ರಾವವನ್ನು ತಡೆಯಲು ಬಳಸುವುದುಂಟು. ಕ್ಷಯರೋಗ ಮುಂತಾದ ರೋಗಗಳಲ್ಲಿ ಇದನ್ನು ಶಕ್ತಿದಾಯಕವಾಗಿ ಉಪಯೋಗಿಸುತ್ತಾರೆ. ಕುಂಬಳಕಾಯಿ ಜ್ಯೂಸ್ ಕುಡಿಯುವುದರಿಂದ ಮೂಲವ್ಯಾಧಿ ಕಡಿಮೆಯಾಗುತ್ತದೆ. ಕುಂಬಳಕಾಯಿ ಸೇವನೆಯಿಂದ ಜೀರ್ಣಕ್ರಿಯೆ ಸರಾಗವಾಗುತ್ತದೆ. ಇದರ ಜ್ಯೂಸ್ ಕುಡಿಯುವುದರಿಂದ ಮಿದುಳು ಶಾಂತವಾಗುತ್ತದೆ.

# ಕ್ಷೇತ್ರದರ್ಶನ




ನಾಗೇಶ್ವರ್

ಗುಜರಾತ್ ರಾಜ್ಯದ ಜಮನಗರ ಜಿಲ್ಲೆಯಲ್ಲಿ ದ್ವಾರಕಾ ನಗರದ ಹತ್ತಿರವಿರುವ ನಾಗೇಶ್ವರದಲ್ಲಿ ಶ್ರೀ ನಾಗೇಶ್ವರ ಜ್ಯೋತಿರ್ಲಿಂಗವಿದೆ. ಶ್ರೀ ನಾಗೇಶ್ವರ ಜ್ಯೋತಿರ್ಲಿಂಗ ಮಂದಿರವು ನೋಡಲು ತುಂಬಾ ಸುಂದರವಾಗಿದ್ದು, ವಿವಿಧ ರೀತಿಯ ಕೆತ್ತನೆಯಿಂದ ಕೂಡಿದ್ದು ಕಲಾಪೂರ್ಣವಾಗಿದೆ. ಇಲ್ಲಿ ಶ್ರೀ ನಾಗೇಶ್ವರ ಜ್ಯೋತಿರ್ಲಿಂಗದ ಪೂಜೆ ಮುಗಿಸಿ ಹತ್ತಿರ ಇರುವ ಪಾರ್ವತಿ ಮಂದಿರಕ್ಕೆ ಹೋಗಬೇಕು. ಇಲ್ಲಿ ಪಾರ್ವತಿಗೆ ನಾಗೇಶ್ವರಿ ಎಂದು ಕರೆಯಲಾಗುತ್ತದೆ. ಈ ಶ್ರೀ ನಾಗೇಶ್ವರ ಜ್ಯೋತಿರ್ಲಿಂಗದ ದರ್ಶನದಿಂದ ಎಲ್ಲಾ ಅಭೀಷ್ಟಗಳೂ ಪೂರ್ಣಗೊಳ್ಳುತ್ತವೆ ಎಂದು ಭಕ್ತರು ನಂಬಿದ್ದಾರೆ. ಶಿವ ಪುರಾಣದ ಇನ್ನೊಂದು ಕಥೆಯಂತೆ ಇಲ್ಲಿ ದಾರುಕಾ ವನವಿತ್ತು. ಚಿಕ್ಕ ಶರೀರದವರಾದ ವಾಲಿಖಿಲ್ಯ ಮುನಿಗಳು ಇಲ್ಲಿ ತಪಸ್ಸು ಮಾಡುತ್ತಿದ್ದರು. ಒಮ್ಮೆ ಶಿವನು ಸರ್ಪಗಳನ್ನು ಧರಿಸಿ ದಿಗಂಬರನಾಗಿ ಆ ವನದಲ್ಲಿ ಸಂಚರಿಸುತ್ತಾನೆ. ಅವನನ್ನು ನೋಡಿದ ಮುನಿ ಪತ್ನಿಯರು ಮೋಹಗೊಂಡು ಅವನ ಹಿಂದೆಯೇ ಹೋಗುತ್ತಾರೆ. ಇದರಿಂದ ಕೋಪಗೊಂಡ ಮುನಿಗಳು ಶಿವನಿಗೆ ಅವನ ಲಿಂಗ ಉದುರಿ ಹೋಗಲಿ ಎಂದು ಶಾಪವಿತ್ತರು. ಹಾಗೆ ಆದಾಗ, ಜಗತ್ತೇ ನಡುಗಿ ಹೋಯಿತು. ಬ್ರಹ್ಮ ಮತ್ತು ವಿಷ್ಣು ಬಂದು ಶಿವನನ್ನು ಜಗತ್ತನ್ನು ಉಳಿಸಲು ಕೋರಿದರು. ಶಿವನು ಪುನಃ ಆ ಲಿಂಗವನ್ನು ಧರಿಸಿದನು. ನಾಗಧರನಾಗಿ ಬಂದ ಶಿವನು ನಾಗೇಶ್ವರನಾಗಿಯೂ ಪಾವತಿಯು ನಾಗೇಶ್ವರಿಯಾಗಿಯೂ ಅಲ್ಲಿ ನೆಲೆಸಿದರು ಎನ್ನಲಾಗುತ್ತದೆ. ಶಿವ ಪುರಾಣದ ಮತ್ತೊಂದು ಕಥೆಯಂತೆ ಶಿವ ಭಕ್ತಳಾದ ಸುಪ್ರಿಯಾಳನ್ನು, ದಾರಕಾವನದ ರಾಜನಾದ ಶಿವ ಭಕ್ತನೂ ಆದ ದಾರುಕನೆಂಬ ನಾಗ ರಾಕ್ಷಸನು ಅನ್ಯ ಸ್ತ್ರೀಯರ ಜೊತೆ ಬಂಧಿಸಿಟ್ಟನು. ಆ ಸ್ತ್ರೀಯರೆಲ್ಲರೂ ಸುಪ್ರಿಯಾಳ ಆದೇಶದಂತೆ ಶಿವ ಮಂತ್ರವನ್ನು ಭಕ್ತಿಯಿಂದ ಜಪಿಸಿದರು. ಶಿವನು ಪ್ರತ್ಯಕ್ಷನಾಗಿ ದಾರುಕನನ್ನು ವಧಿಸಿ ಅವರನ್ನು ಬಿಡುಗಡೆಗೊಳಿಸಿ ಅಲ್ಲಿಯೇ ಜ್ಯೋತಿರ್ಲಿಂಗ ರೂಪದಲ್ಲಿ ನೆಲಸಿದನಂತೆ. ರಾಕ್ಷಸ ದಾರುಕನ ಪತ್ನಿ ದಾರುಕಾಳು ಪಾರ್ವತಿಯನ್ನು ಕುರಿತು ತಪಸ್ಸು ಮಾಡಿ ಅವಳಿಂದ ವರ ಪಡೆದು ದಾರುಕವನದ ರಾಣಿಯಾದಳು. ಅವಳು ತನ್ನ ತಪ: ಶಕ್ತಿಯಿಂದ ದಾರಕ ವನವನ್ನು ಸಮುದ್ರದಲ್ಲಿ ಇರಿಸಿಕೊಂಡು ತನ್ನ ಅನುಚರರಾದ ರಾಕ್ಷಸರ ಮೂಲಕ ತಪಸ್ವಿಗಳನ್ನು ಅಪಹರಿಸಿ ಬಂಧಿಸಿಡುತ್ತಿದ್ದಳು. ಒಮ್ಮೆ ಶಿವ ಭಕ್ತೆ ಸುಪ್ರಿಯಾಳನ್ನು ಅಪಹರಿಸಿ ಅವರೊಡನೆ ಇವಳನ್ನೂ ಕೂಡಿ ಹಾಕಿದಳು. ಸುಪ್ರಿಯಾಳು ಎಲ್ಲರೊಡನೆ ಓಂ ನಮಃ ಶಿವಾಯ ಮಂತ್ರವನ್ನು ಜಪಿಸಿದಳು. ದಾನವರು ಸುಪ್ರಿಯಾಳನ್ನು ವಧಿಸಲು ಮುಂದಾದರು. ಆಗ ಶಿವನು ಪ್ರತ್ಯಕ್ಷನಾಗಿ ಅವಳನ್ನು ಕಾಪಾಡಿದನು ದಾನವರು ತಮ್ಮ ತಪ್ಪನ್ನು ಅರಿತುಕೊಂಡರು. ಶಿವನು ನಂತರ ನಾಗೇಶ್ವರನಾಗಿ ಜ್ಯೋತಿರ್ಲಿಂಗರೂಪದಲ್ಲಿ ಅಲ್ಲಿಯೆ ನೆಲಸಿದನು. ಪಾರ್ವತಿಯೂ ನಾಗೇಶ್ವರಿಯಾಗಿ ನೆಲಸಿದಳು ಎನ್ನುವುದಕ್ಕೆ ಸ್ಥಳ ಪುರಾಣಗಳು ದೊರೆಯುತ್ತವೆ. ಇಂತಹ ಪುಣ್ಯ ಕ್ಷೇತ್ರವನ್ನು ಒಮ್ಮೆ ಬೇಟಿ ನೀಡಿ ಪುನೀತರಾಗಲು ಮರೆಯದಿರಿ.

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ

@ ಕೃಷ್ಣಾಮೃತ





ಪರ್ವತಗಳ ಮಡಿಲಲ್ಲಿ ನೆಲೆಸಿರುವ 3000 –6000 ಮೀಟರ್ ಎತ್ತರದ ವ್ಯಾಪ್ತಿಯಲ್ಲಿರುವ ಭಾರತದ ಅತಿ ಎತ್ತರದ ರಾಷ್ಟ್ರೀಯ ಉದ್ಯಾನವನವೇ ಹೆಮಿಸ್ ರಾಷ್ಟ್ರೀಯ ಉದ್ಯಾನವನ. ಇದು ಜಮ್ಮು ಮತ್ತು ಕಾಶ್ಮೀರ ರಾಜ್ಯದ ಹೆಮ್ಮೆಯಾಗಿದ್ದು, ಭಾರತದಲ್ಲಿ ಅತಿ ದೊಡ್ಡ ಅಧಿಸೂಚಿತ ಸಂರಕ್ಷಿತ ಪ್ರದೇಶವಾಗಿದೆ ಮತ್ತು ಹಿಮಾಲಯದ ಉತ್ತರಕ್ಕೆ, ನಿಖರವಾಗಿ ಪೂರ್ವ ಲಡಾಖ್‌ನಲ್ಲಿದೆ. 600 ಚ.ಕಿ.ಮೀ ಪ್ರದೇಶದ ಹೆಮಿಸ್ ರಾಷ್ಟ್ರೀಯ ಉದ್ಯಾನವನವು ಲೇಹ್‌ನಿಂದ ಕೇವಲ 30 ಕಿ.ಮೀ ದೂರದಲ್ಲಿದೆ. ಇದು ಹಿಮ ಚಿರತೆಗಳಿಗೆ ಜಾಗತಿಕವಾಗಿ ಹೆಸರುವಾಸಿಯಾಗಿದ್ದು, ಒಟ್ಟು 4400 ಚದರ ಕಿಲೋ ಮೀಟರ್ ವಿಸ್ತೀರ್ಣದೊಂದಿಗೆ, ಇದು ದಕ್ಷಿಣ ಏಷ್ಯಾದ ಅತಿದೊಡ್ಡ ರಾಷ್ಟ್ರೀಯ ಉದ್ಯಾನವನವಾಗಿದೆ. 400 ವರ್ಷಗಳಷ್ಟು ಹಳೆಯದಾದ ಹೆಮಿಸ್ ಮಠವು ಉದ್ಯಾನವನದ ಗಡಿಯೊಳಗೆ ಇರುವುದರಿಂದ ಈ ಹೆಸರನ್ನು ಪಡೆದುಕೊಂಡಿದೆ. ಈ ಪ್ರದೇಶವು ಮಳೆಯ ನೆರಳಿನಿಂದ ಕೂಡಿದೆ, ಏಕೆಂದರೆ ಇದು ಹಿಮಾಲಯದಿಂದ ಆಶ್ರಯ ಪಡೆದಿದೆ. ಆದ್ದರಿಂದ ಉದ್ಯಾನವು ಪ್ರಧಾನವಾಗಿ ಒಣ ಕಾಡುಗಳನ್ನು ಹೊಂದಿದ್ದು, ಪರ್ವತದ ಮೇಲಿನ ತೇವಾಂಶವುಳ್ಳ ಇಳಿಜಾರುಗಳಲ್ಲಿ ಸಸ್ಯವರ್ಗದ ಪ್ರಕಾರವು ಭಿನ್ನವಾಗಿರುತ್ತದೆ. ಈ ಉದ್ಯಾನವನದಲ್ಲಿ 15ಕ್ಕೂ ಹೆಚ್ಚು ವಿವಿಧ ಅಳಿವಿನಂಚಿನಲ್ಲಿರುವ ಔಷಧೀಯ ಸಸ್ಯಗಳು ಕಂಡುಬರುತ್ತವೆ. ಈ ರಾಷ್ಟ್ರೀಯ ಉದ್ಯಾನವನದ ಆವರಣದಲ್ಲಿ 1500 ಕ್ಕೂ ಹೆಚ್ಚು ಜನರು ವಾಸಿಸುತ್ತಿದ್ದಾರೆ. ಉದ್ಯಾನವನವು ಶಿಂಗೋ, ಚಿಲ್ಲಿಂಗಾ, ಯುರುತ್ಸೆ, ರುಂಬಕ್ ಮತ್ತು ಸ್ಕು-ಕಾಯಾ ಎಂಬ 5 ಹಳ್ಳಿಗಳಿಂದ ಸುತ್ತುವರಿದಿದೆ. ದಾರಿಯಲ್ಲಿ ಪ್ರಾರ್ಥನಾ ಧ್ವಜಗಳಿವೆ. ಅದರ ಗಡಿಗಳಲ್ಲಿ ಸಿಂಧೂ ಮತ್ತು ಜಸ್ಕರ್ ನದಿ ಹರಿಯುವುದನ್ನು ನೀವು ಕಾಣಬಹುದು. ಹೆಮಿಸ್ ರಾಷ್ಟ್ರೀಯ ಉದ್ಯಾನವನದಲ್ಲಿ ಸುಮಾರು 10 ಪ್ರತಿಶತ ವಲಯವು ಪೊದೆಗಳು, ಹುಲ್ಲುಗಾವಲುಗಳು ಮತ್ತು ಪ್ರತ್ಯೇಕವಾದ ಮರಗಳಿಂದ ಆವೃತವಾಗಿದೆ. ಎತ್ತರಕ್ಕೆ ಹೋದಂತೆ ಸಸ್ಯವರ್ಗದ ಪ್ರಕಾರವು ಬದಲಾಗುತ್ತದೆ. ಹುಲ್ಲುಗಾವಲು ಮರಗಳು, ಜುನಿಪರ್, ಲಾಯ್ಡ್, ವೆರೋನಿಕಾ ಕೆಲವು ಪ್ರಭೇದಗಳು. ಪಾರ್ಕ್ ಪ್ರದೇಶದಲ್ಲಿ 15 ಅಪರೂಪದ ಔಷಧೀಯ ಸಸ್ಯಗಳು ಕಂಡುಬಂದಿವೆ. ಹೆಮಿಸ್ ರಾಷ್ಟ್ರೀಯ ಉದ್ಯಾನವು ಅನೇಕ ಅಪರೂಪದ ಜಾತಿಯ ಪ್ರಾಣಿಗಳಿಗೆ ವಿಶೇಷವಾಗಿ ಜನಪ್ರಿಯವಾಗಿದೆ. ಇವುಗಳು ನಿರ್ದಿಷ್ಟ ಎತ್ತರದಲ್ಲಿ ಕಂಡುಬರುತ್ತವೆ ಮತ್ತು ಹೆಮಿಸ್‌ನ ಭೌಗೋಳಿಕ ವೈಶಿಷ್ಟ್ಯಗಳು ಅವುಗಳಿಗೆ ಸೂಕ್ತವಾದ ನೆಲೆಯಾಗಿದೆ. ಅವುಗಳಲ್ಲಿ ಶಾಪು, ಭಾರಲ್, ಹಿಮ ಚಿರತೆ, ಯುರೇಷಿಯನ್ ಕಂದು ಕರಡಿ, ಕೆಂಪು ನರಿ, ಹಿಮಾಲಯನ್ ಮೌಸ್ ಮೊಲ, ಪಲ್ಲಾಸ್ ಬೆಕ್ಕು, ಐಬೆಕ್ಸ್. ಉದ್ಯಾನದಲ್ಲಿ ಸುಮಾರು ಹದಿನಾರು ಜಾತಿಯ ಸಸ್ತನಿಗಳಿವೆ ಮತ್ತು ಅವುಗಳಲ್ಲಿ ಹೆಚ್ಚಿನವು ಅಳಿವಿನಂಚಿನಲ್ಲಿವೆ. ಹೆಮಿಸ್ ಪಾರ್ಕ್ ಭಾರತದಲ್ಲಿ ನೀವು ಶಾಪೋ ಅಥವಾ ಯುರಿಯಲ್‌ನ್ನು ಕಾಣುವ ಏಕೈಕ ಸ್ಥಳವಾಗಿದೆ. ಇದು ಸ್ಥಳೀಯವಾಗಿ ಅರ್ಕಾರ್ಸ್ ಎಂದೂ ಕರೆಯಲ್ಪಡುವ ಕಾಡು ಕುರಿಗಳ ಉಪಜಾತಿಯಾಗಿದೆ. ರಾಷ್ಟ್ರೀಯ ಉದ್ಯಾನವನದ ರುಂಬಕ್ ಕಣಿವೆ ಪ್ರದೇಶವು ಪಕ್ಷಿ ವಿಹಾರಕ್ಕೆ ಉತ್ತಮವಾಗಿದ್ದು, ಇಲ್ಲಿ ಗೋಲ್ಡನ್ ಹದ್ದು, ಹಿಮಾಲಯನ್ ಸ್ನೋ ಕಾಕ್, ಕಪ್ಪು ರೆಕ್ಕೆಯ ಸ್ನೋ ಫಿಂಚ್, ಚುಕರ್ ಪ್ಯಾಟ್ರಿಡ್ಜ್, ರಣಹದ್ದುಗಳ ವಿವಿಧ ಕುಟುಂಬಗಳು ಮುಂತಾದ 73ಕ್ಕೂ ಹೆಚ್ಚು ಜಾತಿಯ ಪಕ್ಷಿಗಳಿವೆ. ಹೆಮಿಸ್ ಹೊರತು ಪಡಿಸಿ, ಚಾಂಗ್‌ತಾಂಗ್ ವನ್ಯಜೀವಿ ಅಭಯಾರಣ್ಯ ಮತ್ತು ಸಿಕ್ಕಿಂನಲ್ಲಿ ಪ್ರಸ್ತಾವಿತ ತ್ಸೋ ಲಾಮೊ ಶೀತಲ ಮರುಭೂಮಿ ಸಂರಕ್ಷಣಾ ಪ್ರದೇಶವನ್ನೊಳಗೊಂಡಿರುವ ಪ್ಯಾಲರ್ಕ್ಟಿಕ್ ಪರಿಸರ ವಲಯದ ಭಾಗವಾಗಿದೆ. ಸಿಂಧೂ ನದಿಯು ಹೆಮಿಸ್ ಗಡಿಯ ಉತ್ತರದಲ್ಲಿ ಹರಿಯುತ್ತದೆ. ಉದ್ಯಾನವನವು ಕೆಳ ಝನ್ಸ್ಕರ್ ಕಣಿವೆಯಲ್ಲಿನ ಜಲಾನಯನ ಪ್ರದೇಶದ ಪ್ರಮುಖ ಭಾಗವನ್ನು ಒಳಗೊಂಡಿದೆ. ಮಾರ್ಖಾ, ಸುಮ್ದಾಹ್, ರುಂಬಕ್ ಮತ್ತು ಝನ್ಸ್ಕರ್ ಶ್ರೇಣಿಯ ಭಾಗಗಳು ಇಲ್ಲಿ ಜಲಾನಯನ ಪ್ರದೇಶವಾಗಿದ್ದು, ಇದನ್ನು 4 ಫೆಬ್ರವರಿ 1981ರಂದು ರಾಷ್ಟ್ರೀಯ ಉದ್ಯಾನವನವೆಂದು ಘೋಷಿಸಲಾಯಿತು. ಇಲ್ಲಿ ಉತ್ತರ ಭಾರತದಲ್ಲಿಯೇ ಅತೀ ದೊಡ್ಡ ಮಠವು ಲೇಹ್‌ನಿಂದ ಸುಮಾರು 45 ಕಿಮೀ ದೂರದಲ್ಲಿದೆ. ಇದು ಶ್ರೀಮಂತ ಸಾಂಸ್ಕೃತಿಕ ಪರಂಪರೆ ಮತ್ತು ದೀರ್ಘಕಾಲದ ಐತಿಹಾಸಿಕ ಹಾದಿಗಳ ಸ್ಥಳವಾಗಿದೆ. ಹೆಮಿಸ್ ಮಠವು 1672 AD ಯಷ್ಟು ಹಿಂದಿನದು. ಇದು 1000 ಬೌದ್ಧ ಸನ್ಯಾಸಿಗಳಿಗೆ ನೆಲೆಯಾಗಿದ್ದು, ಮಠದ ಒಳಗೆ ಪ್ರಾಚೀನ ಕಲಾಕೃತಿಗಳು, ಬುದ್ಧನ ಪ್ರತಿಮೆಗಳು, ಸ್ತೂಪಗಳ ದೊಡ್ಡ ಸಂಗ್ರಹಗಳಿವೆ. ಗೋತ್ಸಾಂಗ್ ಚಾರಣ ಪ್ರಿಯರಿಗೆ ನೆಚ್ಚಿನ ತಾಣ, ಗೋತ್ಸಾಂಗ್ ಚಾರಣಕ್ಕೆ ಮೊದಲು ವಿಶ್ರಾಂತಿಯ ತಾಣವಾಗಿರುತ್ತದೆ.

# ಕಲ್ಪವೃಕ್ಷ

@ಪ್ರೀತಂ ರೈ ಇ

## ಗ್ರೆನೇಡಿಯರ್ ಮುರಾದ್ ಖಾನ್

ಭಾರತ-ಪಾಕ್ ಯುದ್ಧವು ಅಧಿಕೃತವಾಗಿ ಡಿಸೆಂಬರ್ 03, 1971 ರಂದು ಪ್ರಾರಂಭವಾಯಿತು. ಯುದ್ಧ ಅನಿವಾರ್ಯವೆಂದು ತೋರಿತು ಮತ್ತು ಭಾರತೀಯ ಸೇನೆಯು ಬೆದರಿಕೆಯನ್ನು ಎದುರಿಸಲು ತನ್ನ ಪಡೆಗಳನ್ನು ನಿಯೋಜಿಸಿತು. ಪೂರ್ವ ವಲಯದಲ್ಲಿ ನಿಯೋಜಿಸಲಾದ ಘಟಕಗಳಲ್ಲಿ ಗ್ರೆನೇಡಿಯರ್ ಮುರಾದ್ ಖಾನ್ ಅವರ ಘಟಕ 5 ಗ್ರೆನೇಡಿಯರ್ಸ್ ಒಂದಾಗಿದೆ. ಪೂರ್ವ ವಲಯದಲ್ಲಿ ನಡೆಯುತ್ತಿರುವ ಕಾರ್ಯಾಚರಣೆಗಳ ಭಾಗವಾಗಿ, ಇಂದಿನ ಬಾಂಗ್ಲಾದೇಶದ ರಂಗ್‌ಪುರ ವಿಭಾಗದ ಕುರಿಗ್ರಾಮ್ ಜಿಲ್ಲೆಯ ಭುರುಂಗಮರಿ ಪ್ರದೇಶದಲ್ಲಿ ಶತ್ರು ಪೋಸ್ಟ್ ಅನ್ನು ವಶಪಡಿಸಿಕೊಳ್ಳಲು 5 ಗ್ರೆನೇಡಿಯರ್ಸ್ ಬೆಟಾಲಿಯನ್‌ಗೆ ಆದೇಶಿಸಲಾಯಿತು. ಕಾರ್ಯವನ್ನು ನಿಯೋಜಿಸಲಾದ ತಂಡದ ಭಾಗವಾಗಿ ಜಿಡಿಆರ್ ಮುರಾದ್ ಖಾನ್ ಇದ್ದರು. ಜಿಡಿಆರ್ ಮುರಾದ್ ಖಾನ್ ಮತ್ತು ಅವರ ಸಹಚರರು 1971 ರ ನವೆಂಬರ್ 13/14ರ ರಾತ್ರಿ ಯೋಜಿಸಿದಂತೆ ಶತ್ರು ಶಿಬಿರದ ಮೇಲೆ ದಾಳಿ ನಡೆಸಿದರು. ಆದಾಗ್ಯೂ, ಎಡ ಪಾರ್ಶ್ವದಿಂದ ಭಾರೀ ಮತ್ತು ನಿಖರವಾದ ಗುಂಡು ಹಾರಿಸುತ್ತಿದ್ದ ಶತ್ರು ಮೀಡಿಯಂ ಮೆಷಿನ್ ಗನ್ ಜಿಡಿಆರ್ ಮುರಾದ್ ಖಾನ್ ಮತ್ತು ತಂಡದ ದಾಳಿಯನ್ನು ತಡೆಹಿಡಿಯಿತು. ಸ್ವಂತ ಪಡೆಗಳ ಮುನ್ನಡೆಗೆ ಅನುಕೂಲವಾಗುವಂತೆ ಯಾವುದೇ ಬೆಲೆ ತೆತ್ತು ಶತ್ರು ಎಂಎಂಜಿಯನ್ನು ಮೌನಗೊಳಿಸಬೇಕು ಎಂದು ಜಿಡಿಆರ್ ಮುರಾದ್ ಖಾನ್ ಅರಿತುಕೊಂಡರು. ಸಂದರ್ಭಕ್ಕೆ ತಕ್ಕಂತೆ ಎದ್ದು ನಿಂತ ಗ್ರೆನೇಡಿಯರ್ ಮುರಾದ್ ಖಾನ್ ತನ್ನ ಸುರಕ್ಷತೆಯನ್ನು




ಸಂಪೂರ್ಣವಾಗಿ ನಿರ್ಲಕ್ಷಿಸಿ, ತೀವ್ರವಾದ ಗುಂಡಿನ ದಾಳಿಯಲ್ಲಿ, ಮೀಡಿಯಂ ಮೆಷಿನ್ ಗನ್ ಬಂಕರ್‌ಗೆ ತೆವಳುತ್ತಾ ಹೋಗಿ ಗ್ರೆನೇಡ್‌ನಿಂದ ಬಂದೂಕನ್ನು ಮೌನಗೊಳಿಸಿದರು. ನಂತರ, ಇಬ್ಬರು ಶತ್ರು ಸಿಬ್ಬಂದಿ ಬಯೋನೆಟ್‌ಗಳೊಂದಿಗೆ ತನ್ನ "ಕಂಪನಿ ಕಮಾಂಡರ್" ಮೇಲೆ ದಾಳಿ ಮಾಡುವುದನ್ನು ಅವರು ನೋಡಿದರು. ಅವರು ತಕ್ಷಣ ಮುಂದೆ ಧಾವಿಸಿ ಬರಿ ಕೈ ಹೊಡೆದಾಟದಲ್ಲಿ, ಶತ್ರು ಸೈನಿಕರಲ್ಲಿ ಒಬ್ಬರನ್ನು ಕೊಂದರು. ಆದಾಗ್ಯೂ, ಹಾಗೆ ಮಾಡುವಾಗ, ಅವರು ಗಂಭೀರವಾಗಿ ಗಾಯಗೊಂಡು ತಮ್ಮ ಗಾಯಗಳಿಗೆ ಬಲಿಯಾಗಿ ಹುತಾತ್ಮರಾದರು. ಜಿಡಿಆರ್ ಮುರಾದ್ ಖಾನ್ ಒಬ್ಬ ನಿರ್ಭೀತ ಮತ್ತು ಬದ್ಧ ಸೈನಿಕರಾಗಿದ್ದರು, ಅವರು 21 ವರ್ಷ ವಯಸ್ಸಿನಲ್ಲಿ ತಮ್ಮ ಕರ್ತವ್ಯದ ಸಾಲಿನಲ್ಲಿ ತಮ್ಮ ಪ್ರಾಣವನ್ನು ಅರ್ಪಿಸಿದರು. ಕಾರ್ಯಾಚರಣೆಯ ಸಮಯದಲ್ಲಿ ಅವರ ಅತ್ಯುತ್ತಮ ಧೈರ್ಯ, ಅಚಲ ಹೋರಾಟದ ಮನೋಭಾವ ಮತ್ತು ಸರ್ವೋಚ್ಚ ತ್ಯಾಗಕ್ಕಾಗಿ ಜಿಡಿಆರ್ ಮುರಾದ್ ಖಾನ್ ಅವರಿಗೆ ದೇಶದ ಮೂರನೇ ಅತ್ಯುನ್ನತ ಶೌರ್ಯ ಪ್ರಶಸ್ತಿಯಾದ "ವೀರ ಚಕ್ರ" ವನ್ನು ಜನವರಿ 26, 1972 ರಂದು ನೀಡಲಾಯಿತು. ಜಿಡಿಆರ್ ಮುರಾದ್ ಖಾನ್ ಅವರ ಪತ್ನಿ ಶ್ರೀಮತಿ ದಾದಮ್ ದೇವಿ ಅವರನ್ನು ಅಗಲಿದ್ದಾರೆ. ಗ್ರೆನೇಡಿಯರ್ ಮುರಾದ್ ಖಾನ್ ರಾಜಸ್ಥಾನದ ನಾಗೌರ್ ಜಿಲ್ಲೆಯ ಖರಿಯಾ ಗ್ರಾಮದವರಾಗಿದ್ದು, ಫೆಬ್ರವರಿ 04, 1950 ರಂದು ಜನಿಸಿದರು. ಶ್ರೀ ಎಸ್ಮಾಯಿಲ್ ಖಾನ್ ಅವರ ಪುತ್ರರಾದ ಜಿಡಿಆರ್ ಮುರಾದ್ ಖಾನ್ ಅವರು ಫೆಬ್ರವರಿ 04, 1968 ರಂದು ತಮ್ಮ 18 ನೇ ವಯಸ್ಸಿನಲ್ಲಿ ಶಾಲಾ ಶಿಕ್ಷಣವನ್ನು ಪೂರ್ಣಗೊಳಿಸಿದ ನಂತರ ಸೈನ್ಯಕ್ಕೆ ಸೇರಿದರು. ಅವರು 5 ಗ್ರೆನೇಡಿಯರ್ಸ್ ಬೆಟಾಲಿಯನ್ ಆಫ್ ದಿ ಗ್ರೆನೇಡಿಯರ್ಸ್‌ಗೆ ಸೇರಿಕೊಂಡರು. ಇವರನ್ನು ಕರಾವಳಿ ತರಂಗಿಣಿ ಹೆಮ್ಮೆಯಿಂದ ನೆನಪಿಸಿಕೊಳ್ಳುತ್ತಿದೆ.

# ಪಾರಿಜಾತ

ಕರಾವಳಿ ತರಂಗಿಣಿ

ಒಂದು ಮನೆಯಲ್ಲಿ ಹುಟ್ಟಿ ಇನ್ನೊಂದು ಮನೆ ಬೆಳಗುವ ಹೆಣ್ಣು, ತನ್ನ ಬದುಕಿನಲ್ಲಿ ತನ್ನವರನ್ನು ಕಳೆದುಕೊಂಡಾಗ ಒಮ್ಮೆ ವಿಚಲಿತಳಾದರೂ ಮತ್ತೆ ತಾನು ಮೈಕೊಡವಿ ತನ್ನವರಿಗಾದ ಕಷ್ಟ ಇನ್ನೊಬ್ಬರಿಗೆ ಆಗಬಾರದು ಎನ್ನುವ ನಿಟ್ಟಿನಲ್ಲಿ ತಾನು ದುಡಿದು ಈ ಸಮಾಜಕ್ಕೆ ಮಾದರಿಯಾದ ದೀಮಂತ ಮಹಿಳೆಯರನ್ನು ನಾವು ನೋಡಿದ್ದೇವೆ. ಅಂತಹ ದೀಮಂತ ಮಹಿಳೆಯರಲ್ಲಿ ಕರಾವಳಿ ತರಂಗಿಣಿಯ ಇಂದಿನ ಅತಿಥಿ "ಆನಂದಿ ಗೋಪಾಲ ಜೋಷಿ". ಇವರನ್ನು ಆನಂದಿಬಾಯಿ ಗೋಪಾಲರಾವ್ ಜೋಶಿ ಎಂತಲೂ ಕರೆಯುತ್ತಾರೆ. ಆನಂದಿಬಾಯಿ ಅವರ ಮೊದಲ ಹೆಸರು ಯಮುನಾ. ಇವರು ಮಹಾರಾಷ್ಟ್ರದ ಪುಣೆಯಲ್ಲಿ, ಒಂದು ಸಾಂಪ್ರದಾಯಿಕ ಬ್ರಾಹ್ಮಣ ಕುಟುಂಬದಲ್ಲಿ ಮಾರ್ಚ್ 31, 1865ರಲ್ಲಿ ಜನಿಸಿದರು. ತಮ್ಮ ಒಂಬತ್ತನೇ ವಯಸ್ಸಿನಲ್ಲಿ ತಮಗಿಂತಲೂ ಇಪ್ಪತ್ತು ವರ್ಷ ದೊಡ್ಡವರಾದ ಗೋಪಾಲ್ ರಾವ್ ಅವರನ್ನ ವರಿಸಿದರು. ಮದುವೆಯ ನಂತರ ಇವರ ಹೆಸರು ಯಮುನಾದಿಂದ ಆನಂದಿಬಾಯಿ ಎಂದು ಬದಲಾಯಿತು. ಇವರ ಪತಿ ಗೋಪಾಲ್ ರಾವ್ ರವರು ಮಹಾರಾಷ್ಟ್ರದ ಕಲ್ಯಾಣದಲ್ಲಿ ಗುಮಾಸ್ತರಾಗಿ ಕಾರ್ಯನಿರ್ವಹಿಸುತ್ತಿದ್ದರು. ತದನಂತರ ಇವರಿಗೆ ಅಲಿಬಾಗ್ ಮತ್ತು ಕಲ್ಕತ್ತಾಗೆ ವರ್ಗಾವಣೆ ಆಯಿತು. ಗೋಪಾಲ್ ರಾವ್‌ರವರು ಆ ಕಾಲದಲ್ಲೇ ಹೆಣ್ಣು ಮಕ್ಕಳಿಗೆ ಶಿಕ್ಷಣವನ್ನು ಕೊಡಬೇಕು ಎಂಬ ಮನೋಭಾವದವರಾಗಿದ್ದರು. ಆನಂದಿಬಾಯಿಯವರ ಚುರುಕುತನವನ್ನು ನೋಡಿ, ಅವರ ಶಿಕ್ಷಣಕ್ಕೆ ಪ್ರೋತ್ಸಾಹಿಸಿದರು. ಆನಂದಿಬಾಯಿಯವರು ತಮ್ಮ ಹದಿನಾಲ್ಕನೇ ವಯಸ್ಸಿನಲ್ಲಿ ಗಂಡು ಮಗುವಿಗೆ ಜನ್ಮ ನೀಡಿದರು, ಆದರೆ ಉತ್ತಮ ಚಿಕಿತ್ಸಾ ಸೌಲಭ್ಯಗಳಿಲ್ಲದ ಕಾರಣ, ಹತ್ತು ದಿನಗಳ ನಂತರ ಮಗು ಕೊನೆಯುಸಿರೆಳೆಯಿ




ತು. ಇದು ಆನಂದಿಬಾಯಿಯವರ ಜೀವನದಲ್ಲಿನ ಬಹು ಮುಖ್ಯ ಘಟ್ಟ. ಅಂದೇ ಅವರಲ್ಲಿ ವೈದ್ಯರಾಗಬೇಕು ಎಂಬ ಛಲ ಹುಟ್ಟಿತು. ಪತಿ ಗೋಪಾಲ್ ರಾವ್ ಅವರ ಸಹಕಾರದಿಂದ ಆನಂದಿಬಾಯಿರವರು ಪಾಶ್ಚಾತ್ಯದಲ್ಲಿ ವೈದ್ಯಕೀಯ ಪದವಿಪಡೆಯಲು ಸಿದ್ಧರಾದರು. ಅದಕ್ಕಾಗಿ ಅವರ ಪತಿ 1880ರಲ್ಲಿ ಅಮೇರಿಕಾದ ಮಿಷನರಿ, ರಾಯಲ್ ವೆಲ್ದರ್‌ಗೆ ಪತ್ರವನ್ನು ಬರೆದರು. ಆನಂದಿಬಾಯಿಯವರ ಈ ನಿರ್ಧಾರಕ್ಕೆ ಅನೇಕ ಬ್ರಾಹ್ಮಣ ಸಮಾಜದವರು ವಿರೋಧವನ್ನು ವ್ಯಕ್ತಪಡಿಸಿದರು. ಆದರೆ ಪತಿಯ ನಿರಂತರ ಬೆಂಬಲ ಅವರ ಆತ್ಮವಿಶ್ವಾಸವನ್ನು ಹೆಚ್ಚಿಸಿತು. ಅದೇ ಛಲದಿಂದ 1883 ರಲ್ಲಿ ಅವರು ಅಮೆರಿಕಾಕ್ಕೆ ತೆರಳಿದರು. ಅಲ್ಲಿನ ಡ್ರೆಕ್ಸೆಲ್ ಮಹಿಳಾ ವೈದ್ಯಕೀಯ ವಿಶ್ವವಿದ್ಯಾನಿಲಯವನ್ನು ಸೇರಿಕೊಂಡರು. ಆನಂದಿಬಾಯಿರವರು ಯಾವಾಗಲು ನಿಶಕ್ತಿ, ತಲೆನೋವು, ಶೀತ, ಜ್ವರದಿಂದ ಬಳಲುತ್ತಿದ್ದರೂ ಧೃತಿಗೆಡದೇ ಓದಿನತ್ತ ಗಮನ ಹರಿಸಿ, ಎಲ್ಲಾ ಕಷ್ಟಗಳ ನಡುವೆ ಮಾರ್ಚ್ 11, 1886 ರಲ್ಲಿ ವೈದ್ಯಕೀಯ ಪದವಿಯನ್ನು ಪಡೆದರು. ಇವರ ಈ ಸಾಧನೆಯನ್ನ ರಾಣಿ ವಿಕ್ಟೋರಿಯರವರೂ ಸಹ ಹೊಗಳಿದ್ದಾರೆ. ಭಾರತಕ್ಕೆ ವಾಪಸ್ಸಾದ ಇವರಿಗೆ ಅದ್ದೂರಿ ಸ್ವಾಗತ ಕೋರಿ, ಇವರನ್ನು ಕೊಲ್ಹಾಪುರದ ಆರ್.ಸಿ. ಎಸ್. ಎಮ್ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ಸಿ.ಪಿ.ಆರ್ ಆಸ್ಪತ್ರೆಯ ಮಹಿಳಾ ವಿಭಾಗದ ಮುಖ್ಯಸ್ಥರನ್ನಾಗಿ ಮಾಡಲಾಯಿತು. ಅಮೇರಿಕಾದ ನೆಲದ ಮೇಲೆ ನಡೆದ ಮೊದಲ ಹಿಂದೂ ಮಹಿಳೆ ಎಂಬ ಹೆಗ್ಗಳಿಕೆಯೂ ಇವರಿಗೆ ಸಲ್ಲುತ್ತದೆ. ದುರದೃಷ್ಟವಶಾತ್, ಆನಂದಿಬಾಯಿರವರು ತಮ್ಮ ಇಪ್ಪತ್ತೆರಡನೆ ವಯಸ್ಸಿನಲ್ಲಿಯೇ ಅನಾರೋಗ್ಯದ ಕಾರಣ ಫೆಬ್ರವರಿ26. 1887ರಲ್ಲಿ ವಿಧಿವಶರಾದರು. ಅವರ ಸಾವಿಗೆ ಇಡೀ ದೇಶವೇ ಮರುಗಿತು. ಸಣ್ಣ ವಯಸ್ಸಿಗೆ ಅದ್ಭುತ ಸಾಧನೆ ತೋರಿ ಮಹಿಳಾ ಸಮಾಜಕ್ಕೆ ಮಾದರಿಯಾದ ಇವರಿಗೆ ಕರಾವಳಿ ತರಂಗಿಣಿ ನಮಿಸುತ್ತಿದೆ

## ಜಾತಿ ಗಣತಿಯಲ್ಲಿ ರಾಜಕೀಯ ಬೇಡ – ಡಿ.ಕೆ.ಶಿ

ಒಂದನೇ ಪುಟದಿಂದ......

ಮುಂದಾಗಿರುವ ಸರ್ಕಾರದ ಕ್ರಮವನ್ನು ವಿರೋಧ ಪಕ್ಷಗಳು ಟೀಕಿಸುತ್ತಿರುವ ಬಗ್ಗೆ ಕೇಳಿದಾಗ, "ಕುಮಾರಸ್ವಾಮಿ, ವಿಜಯೇಂದ್ರ, ಅಶೋಕ್ ಅವರು ಪುನಃ ಮಾಧ್ಯಮಗೋಷ್ಠಿ ಮಾಡಿ ಹಳೆಯ ವರದಿಯನ್ನೇ ಸ್ವೀಕರಿಸಿ ಎಂದು ಈಗ ಹೇಳಲಿ. ವಿರೋಧ ಪಕ್ಷದವರು ಈಗ ಏನೇನೋ ಮಾತನಾಡುತ್ತಿದ್ದಾರೆ. ಇದಕ್ಕೆ ನಿಧಾನಕ್ಕೆ ಉತ್ತರ ನೀಡೋಣ. ಯಾರು, ಯಾರು ಏನೇನು ಹೇಳುತ್ತಿದ್ದರು, ಅಶೋಕ್ ಏನು ಹೇಳಿದ್ದಾರೆ ಎಂಬುದನ್ನು ಮಾಧ್ಯಮಗಳು ಮತ್ತೆ ಪ್ರಸಾರ ಮಾಡಲಿ. ವಿರೋಧ ಪಕ್ಷದವರು ಹಿಂದೆ ಒಂದು, ಮುಂದೆ ಒಂದು ಮಾತನಾಡಿ ರಾಜಕೀಯವಾಗಿ ಬಣ್ಣಕಟ್ಟುತ್ತಿದ್ದಾರೆ. ಯಾರು ಏನು ಬೇಕಾದರೂ ಹೇಳಲಿ. ಜನರು, ಶಾಸಕರುಗಳ ಭಾವನೆ, ಅಭಿಪ್ರಾಯ ಅರಿತು ಕಾನೂನಾತ್ಮಕವಾಗಿ ಜಾತಿಗಣತಿ ಮರುಸಮೀಕ್ಷೆಗೆ ಒಪ್ಪಿಗೆ ಕೊಟ್ಟಿದ್ದೇವೆ. ಸೆಕ್ಷನ್ 11 ರ ಪ್ರಕಾರ ಜಾತಿಗಣತಿಗೆ 10 ವರ್ಷವಾಗಿದೆ ಎಂದು ಬೇಕಾದಷ್ಟು ಜನ ನ್ಯಾಯಾಲಯಕ್ಕೆ ಹೋಗಿ ತಡೆಯಾಜ್ಞೆ ತರಬಹುದು. 11.04.2015 ಅಲ್ಲಿ ಜಾತಿಗಣತಿ ಪ್ರಾರಂಭವಾಗಿ 30.05.2015 ರಲ್ಲಿ ಮುಗಿದಿತ್ತು. ಈ ವರ್ಷ ಫೆ. 29 ರಂದು ಜಾತಿಗಣತಿ ವರದಿ ಸಲ್ಲಿಕೆಯಾಗಿತ್ತು. ನಂತರ ಕ್ಯಾಬಿನೆಟ್‌ನಲ್ಲಿ 5-6 ಬಾರಿ ಇದರ ಬಗ್ಗೆ ಚರ್ಚೆ ಮಾಡಲಾಗಿತ್ತು. ವಿರೋಧ ಪಕ್ಷದವರು ಸಹ ಮರುಗಣತಿಗೆ ಒತ್ತಾಯ ಮಾಡುತ್ತಿದ್ದರು. ಈ ಮಧ್ಯೆ ಹೈಕಮಾಂಡ್ ಅವರು ನಮ್ಮನ್ನು ಕರೆಸಿ ಈ ಬಗ್ಗೆ ಒಂದಷ್ಟು ಮಾರ್ಗದರ್ಶನ ನೀಡಿದ್ದಾರೆ" ಎಂದರು. ಲಿಂಗಾಯತ ಮತ್ತು ಒಕ್ಕಲಿಗರಿಂದ ಈ ಹಿಂದೆ ವಿರೋಧ ವ್ಯಕ್ತವಾದ ಬಗ್ಗೆ ಕೇಳಿದಾಗ, "ಇದರ ಬಗ್ಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ. ಸಮಾಜದ ಎಲ್ಲರನ್ನು ಒಳಗೊಂಡ ಸಮೀಕ್ಷೆಇದಾಗಲಿದೆ. ಹೊರನಾಡು ಕನ್ನಡಿಗರಿಗೆ ಆನ್ ಲೈನ್ ಮೂಲಕ ಸಮೀಕ್ಷೆಯಲ್ಲಿ ಭಾಗವಹಿಸುವಂತೆ ವ್ಯವಸ್ಥೆ ಕಲ್ಪಿಸಲಾಗುವುದು" ಎಂದು ಹೇಳಿದರು. "ಹೈಕಮಾಂಡ್ ನಮಗೆ ಮಾರ್ಗದರ್ಶನ ಮಾತ್ರ ನೀಡಿದೆ. 10 ವರ್ಷಗಳು ಆಗಿರುವ ಕಾರಣಕ್ಕೆ ಸಮಾಜದ ಎಲ್ಲರನ್ನು ಒಳಗೊಳ್ಳುವುದು ನಮ್ಮ ಉದ್ದೇಶ. ಇದು ಕಾಂಗ್ರೆಸ್ ಪಕ್ಷದ ಮೂಲ ಆಶಯ" ಎಂದರು.

## ನನ್ನನ್ನು ಕಂಡರೆ ಸರ್ಕಾರಕ್ಕೆ ಭಯ– ಸೂಲಿಬೆಲೆ

ಒಂದನೇ ಪುಟದಿಂದ......

ಪ್ರಯತ್ನ ನಡೆಯುತ್ತಿರಬಹುದು ಎಂದು ಸಂಶಯ ವ್ಯಕ್ತಪಡಿಸಿದ್ದಾರೆ. ನನ್ನ ಧ್ವನಿಯನ್ನು ಕಡಿಮೆ ಮಾಡಲು ಸರ್ಕಾರ ಈ ರೀತಿ ಮಾಡುತ್ತಿದೆ. ಇದಕ್ಕೆ ಹೆದರುವ ಜನ ನಾವಲ್ಲ. ಕಾಂಗ್ರೆಸ್‌ಗೆ ಮುಂದಿನ ದಿನಗಳಲ್ಲಿ ನಾನು ತೊಡಕಾಗಬಹುದು ಎಂಬ ಆತಂಕವಿದೆ. 2022-25 ರ ನನ್ನ ವಿರುದ್ಧದ ಪ್ರಕರಣಗಳ ಬಗ್ಗೆ ಕಷ್ಟಪಡುವ ಅಗತ್ಯವಿಲ್ಲ. ನಾನೇ ನನ್ನ ಕೇಸುಗಳ ಮಾಹಿತಿ ಕೊಡುತ್ತೇನೆ. ಕಾಂಗ್ರೆಸ್ ಸರ್ಕಾರ ಅದೂ ಸಿದ್ದರಾಮಯ್ಯ ಮುಖ್ಯಮಂತ್ರಿಯಾದ ಮೇಲೆ ಆಗಿರುವ ಎಫ್‌ಐಆರ್‌ಗಳು ಎಂದು ಹೇಳಿದರು. ನನ್ನ ಬಗ್ಗೆ ಸಿದ್ದರಾಮಯ್ಯ ಸರ್ಕಾರಕ್ಕೆ ಭಯ ಇದ್ದು ಒಟ್ಟು 5 ಕೇಸ್‌ಗಳು ದಾಖಲಾಗಿವೆ. ಎರಡು ಕೇಸ್ ಶಿವಮೊಗ್ಗದಲ್ಲಿ ದಾಖಲಾದರೆ ಇನ್ನು ಎರಡು ಟ್ವೀಟ್‌ಗೆ ಸಂಬಂಧಿಸಿದಂತೆ ದಾಖಲಾಗಿವೆ. ಸಿದ್ದರಾಮಯ್ಯ ವಿರುದ್ಧ ಮಾತನಾಡಿದ್ದಕ್ಕೆ ಪೊಲೀಸ್ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿದ್ದಾರೆ. ಮಲ್ಲಿಕಾರ್ಜುನ ಖರ್ಗೆಯವರ ಆಸ್ತಿಗೆ ಸಂಬಂಧಪಟ್ಟಂತೆ ಅಯೋಗ್ಯ ಪದ ಬಳಕೆ ಮಾಡಿದ್ದೆ, ಅಯೋಗ್ಯ ಪದಕ್ಕೆ ಜಾತಿ ನಿಂದನೆ ಕೇಸ್ ಹಾಕಿದ್ದು ಇದು ಸುಪ್ರೀಂಕೋರ್ಟ್‌ನಲ್ಲಿದೆ ಎಂದರು. ನಾನು ಇತಿಹಾಸ ಅಷ್ಟೇ ಮಾತನಾಡುತ್ತೇನೆ. ಮಹಮ್ಮದ್ ಘೋರಿ ಬಗ್ಗೆ ಮಾತನಾಡಿದರೆ ಮುಸ್ಲಿಮರಿಗೆ ಮಾತನಾಡಿದ್ದು ಎಂದರೆ ಹೇಗೆ ಎಂದು ಅವರು ಪ್ರಶ್ನಿಸಿದ್ದಾರೆ.

## ಪ್ರಚೋದನಕಾರಿ ಹೇಳಿಕೆಗೆ ಅವಕಾಶ ನೀಡಬಾರದು–ಯು ಟಿ ಖಾದರ್

ಒಂದನೇ ಪುಟದಿಂದ......

ಮಾಡುವ ಕೆಲಸವಾಗಬಾರದು. ಅದು ಮನಸ್ಸಿಗೆ ಮತ್ತು ದೇಹಕ್ಕೆ ಹಿತ ನೀಡುವಂತಾಗಬೇಕು. ಈ ನಿಟ್ಟಿನಲ್ಲಿ ಪೊಲೀಸರ ಪಾತ್ರ ಹೆಚ್ಚಿದೆ. ಜಿಲ್ಲೆಯಲ್ಲಿ ಶಾಂತಿ ಸೌಹಾರ್ದತೆಗೆ ನಿಷ್ಪಕ್ಷಪಾತ ಕ್ರಮ ಅಗತ್ಯ. ಹಜ್ ಯಾತ್ರೆಗೆ ಹೋಗುವ ಮುನ್ನಕಮೀಷನರ್, ಎಸ್ಪಿಗೆ "ಯಾರಿಗೂ ಪ್ರಚೋದನಕಾರಿ ಹೇಳಿಕೆಗೆ ಅವಕಾಶ ನೀಡಬಾರದು" ಎಂದು ಹೇಳಿದ್ದೆ. ದ್ವೇಷ ಭಾಷಣ, ಪ್ರಚೋದನಕಾರಿ ಬರಹ ಬರೆಯುವರ ವಿರುದ್ಧ ಕ್ರಮ ಕೈಗೊಳ್ಳಲು ಸ್ಪಷ್ಟವಾಗಿ ತಿಳಿಸಿದ್ದೆ. ಆಗ ನೀವು ಪೊಲೀಸರ ಕೆಲಸ ಮಾಡಿ, ಅದು ಬಿಟ್ಟು ವಕೀಲರು ಅಥವಾ ನ್ಯಾಯಾಧೀಶರ ಕೆಲಸ ಮಾಡಬೇಡಿ ಎಂದು ಹೇಳಿದ್ದೆ. ಯಾರಿಗೆಯಾರನ್ನೂ ಕೊಲ್ಲುವ ಹಲ್ಲೆ ಮಾಡುವ ಅಧಿಕಾರ ಇಲ್ಲ. ಇದರ ವಿರುದ್ಧ ಎಲ್ಲರೂ ವಿರೋಧ ಮತ್ತು ಖಂಡನೆ ಮಾಡಬೇಕು. ಎಲ್ಲಾ ಕೊಲೆಗಡುಕರನ್ನು ಸಮಾಜ ಬಹಿಷ್ಕರಿಸಬೇಕು. ಇಂಥ ಕೃತ್ಯ ಮಾಡಿದವರಿಗೆ ಯಾರು ಸಹಕಾರ ನೀಡಬಾರದು. ವಕೀಲರು, ಕೋರ್ಟ್, ಜನಪ್ರತಿನಿಧಿಗಳು ಯಾರು ಕೂಡಾ ಬೆಂಬಲ ನೀಡಬಾರದು. ಇದರಿಂದ ಮಾತ್ರ ಜಿಲ್ಲೆಯಲ್ಲಿ ಶಾಂತಿ ಸೌಹಾರ್ದತೆ ಕಾಪಾಡಲು ಸಾಧ್ಯ. ಒಂದೇ ರೀತಿ ಕಾನೂನು ನಡೆಸಲಿ ಎಂದರು.

## ಬಸದಿ, ಸಿಖ್ ಗುರುದ್ವಾರ ಅರ್ಚಕರಿಗೆ ಗೌರವಧನಕ್ಕೆ ಅರ್ಜಿ ಆಹ್ವಾನ

ಮಂಗಳೂರು : ಜೈನ್ ಸಮುದಾಯದ ಬಸದಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಧಾನ ಮತ್ತು ಸಹಾಯಕ ಅರ್ಚಕರುಗಳಿಗೆ ಹಾಗೂ ಸಿಖ್ ಗುರುದ್ವಾರಗಳಲ್ಲಿನ ಮುಖ್ಯ ಮತ್ತು ಸಹಾಯಕ ಗ್ರಂಥಿಗಳಿಗೆ ಮಾಸಿಕ ಗೌರವಧನ ನೀಡಲು ನಿಗದಿತ ನಮೂನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಜೂನ್ 26. ಹೆಚ್ಚಿನ ಮಾಹಿತಿಗೆ ಅರ್ಜಿ ನಮೂನೆ ಮತ್ತು ಇತರ ಮಾಹಿತಿಗೆ ನಗರದ ಪಾಂಡೇಶ್ವರದ ಮೌಲಾನ ಆಝಾದ್ ಭವನದಲ್ಲಿರುವ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕಚೇರಿ ಸಂಪರ್ಕಿಸಬಹುದು ಎಂದು ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಶುಪಾಲನಾ ಚಟುವಟಿಕೆಗಳ ತರಬೇತಿ: ಅರ್ಜಿ ಆಹ್ವಾನ

ಮಂಗಳೂರು-ದ.ಕ. ಜಿಲ್ಲೆಯ ಆಸಕ್ತ ರೈತರಿಗೆ ಪಶುಪಾಲನಾ ಇಲಾಖೆಯ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ಮಂಗಳೂರು ವತಿಯಿಂದ ಪಶುಪಾಲನಾ ಚಟುವಟಿಕೆಗಳ ಬಗ್ಗೆ ತರಬೇತಿ ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮಂಗಳೂರು ತಾಲೂಕು – 9243306956/9141010713, ಸಂಪರ್ಕಿಸಬಹುದು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಮುಖ್ಯ ಪಶುವೈದ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಸತಿ ಶಾಲೆಗಳ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕವಿಶಿಸಂ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಅಟಲ್ ಬಿಹಾರಿ ವಾಜಪೇಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್ ಅಂಬೇಡ್ಕರ್, ಶ್ರೀಮತಿ ಇಂದಿರಾ ಗಾಂಧಿ ಹಾಗೂ ಶ್ರೀ ನಾರಾಯಣ ಗುರು ವಸತಿ ಶಾಲೆಗಳ 2025-26ನೇ ಶೈಕ್ಷಣಿಕ ಸಾಲಿನಲ್ಲಿ 7 ಮತ್ತು 8ನೇ ತರಗತಿಗಳಿಗೆ ಮಧ್ಯಂತರ ದಾಖಲಾತಿಗಾಗಿ ಪ್ರವೇಶ ಪರೀಕ್ಷೆಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ವಸತಿ ಶಾಲೆಗಳನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಲ್ಲೇಶಪ್ಪ ತಿಳಿಸಿದ್ದಾರೆ.

## ಸಹಾಯಧನ–ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ರಾಜ್ಯ ಕಾಡುಗೊಲ್ಲ ಅಭಿವೃದ್ಧಿ ನಿಗಮದ ಯೋಜನೆಗಳಡಿ 2025-26 ನೇ ಸಾಲಿಗೆ ಸಹಾಯಧನ ಹಾಗೂ ಸಾಲ ಸೌಲಭ್ಯವನ್ನು ಪಡೆಯಲು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಕೇಂದ್ರ ಕಛೇರಿಯ ದೂರವಾಣಿ ಸಂಖ್ಯೆ 080-22374848/7899899039 ಹಾಗೂ ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಛೇರಿಗಳಲ್ಲಿ ಸಂಪರ್ಕಿಸಬಹುದು.

## ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ : ಗ್ರಾಮೀಣ ಪುನರ್ವಸತಿ ಯೋಜನೆಯಡಿ ನಗರಸಭೆ, ಪಟ್ಟಣ ಪಂಚಾಯ್ತಿ ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರು (ಯುಆರ್ ಡಬ್ಲ್ಯು), ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು (ವಿಆರ್‌ಡಬ್ಲ್ಯು) ಹುದ್ದೆಗಳು ಖಾಲಿ ಇದ್ದು, ಬೌದ್ಧಿಕ ವಿಕಲತೆ (ಬುದ್ಧಿಮಾಂದ್ಯತೆ) ಹಾಗೂ ಮಾನಸಿಕ ಅಸ್ವಸ್ಥತೆ ಇರುವ ವಿಕಲಚೇತನರನ್ನು ಹೊರತುಪಡಿಸಿ ಅರ್ಜಿ ಸಲ್ಲಿಸಬಯಸುವವರು ಜುಲೈ, 07ರೊಳಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಮೊ.ಸಂ. 8073192914 ಸಂಖ್ಯೆಗಳನ್ನು ಹಾಗೂ ಕಚೇರಿ ದೂರವಾಣಿ ಸಂಖ್ಯೆ.08272-295829ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು

## ಸವಿತಾ ಸಮಾಜ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆಗಳಲ್ಲಿ ಸೇವಾ ಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ (ನಿ), ಕೊಡಗು ಜಿಲ್ಲೆ ಮಡಿಕೇರಿ ಇವರನ್ನು ದೂ. ಸಂ.08272-221656 ಮುಖಾಂತರ ಸಂಪರ್ಕಿಸಬಹುದು

## ಪ್ರಚೋದನೆ ನಿಲ್ಲಿಸಿ ಶಾಂತಿಗೆ ಪ್ರಯತ್ನಿಸಲಿ : ಪದ್ಮರಾಜ್ ಪೂಜಾರಿ




ಮಂಗಳೂರು : ಜಿಲ್ಲೆಯ ಬಿಜೆಪಿಯವರಿಗೆ ಸಾಮಾನ್ಯ ಜ್ಞಾನವಿದ್ದಲ್ಲಿ ನಾಯಕರನ್ನು ಕರೆಸಿ ಪ್ರಚೋದನೆ ನೀಡುವುದನ್ನು ಬಿಟ್ಟು ಶಾಂತಿ ನೆಲೆಸುವ ಸಂದೇಶ ಸಮಾಜಕ್ಕೆ ನೀಡುವಂತೆ ವಿನಂತಿಸಬೇಕಿತ್ತು. ಆದರೆ ಬಿಜೆಪಿ ನಾಯಕರು ಇಲ್ಲಿ ಬಂದು ಪೊಲೀಸರ ಆತ್ಮಸ್ಥೈರ್ಯ ಕೆಡಿಸುವ, ಅವರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡುವ ಕಾರ್ಯ ಮಾಡಿದ್ದಾರೆ ಎಂದು ಕೆಪಿಸಿಸಿ ಮಾಜಿ ಪ್ರಧಾನ ಕಾರ್ಯದರ್ಶಿ ಪದ್ಮರಾಜ್ ಆರ್.ಪೂಜಾರಿ ಆರೋಪಿಸಿದ್ದಾರೆ. ದ.ಕ. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ನಡೆದ ಅಹಿತಕರ ಘಟನೆಗಳ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕರು ಭೇಟಿ ನೀಡಿ ಇಲ್ಲಿನ ಸಾಮಾಜಿಕ, ಧಾರ್ಮಿಕ, ಸಂಘ ಸಂಸ್ಥೆಗಳ ಪ್ರಮುಖರನ್ನು, ಅಧಿಕಾರಿಗಳನ್ನು ಭೇಟಿ ಮಾಡಿ ಅಭಿಪ್ರಾಯ ಸಂಗ್ರಹಿಸಿದ್ದಾರೆ. ಪೊಲೀಸ್ ಅಧಿಕಾರಿಗಳನ್ನು ಭೇಟಿ ಮಾಡಿ ಶಾಂತಿ ನೆಲೆಸುವ ನಿಟ್ಟಿನಲ್ಲಿ ಪೂರ್ಣವಾದ ಸ್ವಾತಂತ್ರ್ಯ ಇರುವುದನ್ನು ಖಾತರಿಪಡಿಸಿದ್ದಾರೆ. ಇದು ಬಿಜೆಪಿ ಮತ್ತು ಕಾಂಗ್ರೆಸ್‌ಗೆ ಇರುವ ವ್ಯತ್ಯಾಸ. ಇದನ್ನು ಜನರು ಅರ್ಥ ಮಾಡಿಕೊಳ್ಳಬೇಕು ಎಂದರು.


## ಟ್ರೇಡ್ ಲೈಸೆನ್ಸ್ ನವೀಕರಿಸಲು ನಗರಪಾಲಿಕೆ ಸೂಚನೆ

ಮಂಗಳೂರು : ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ 60 ವಾರ್ಡ್‌ಗಳ ಎಲ್ಲಾ ಉದ್ದಿಮೆದಾರರು ಕಡ್ಡಾಯವಾಗಿ ಉದ್ದಿಮೆ ಪರವಾನಿಗೆಯನ್ನು ಪಡೆದುಕೊಳ್ಳಬೇಕಾಗಿದೆ. ಆನ್‌ಲೈನ್ ತಂತ್ರಾಶದ ಮುಖಾಂತರ ಹೊಸ ಉದ್ದಿಮೆದಾರರು ಅರ್ಜಿಯನ್ನು ಸಲ್ಲಿಸಿ ಉದ್ದಿಮೆ ಪರವಾನಿಗೆ ಪಡೆಯುವುದು ಅವಶ್ಯಕವಾಗಿದೆ. ಹಾಗಾಗಿ ಉದ್ದಿಮೆದಾರರು ಈ ಹಿಂದಿನ ಆರ್ಥಿಕ ವರ್ಷದಲ್ಲಿ ಪಡೆದು ಕೊಂಡಿರುವ ಉದ್ದಿಮೆ ಪರವಾನಿಗೆ ನವೀಕರಿಸದೆ ಇದ್ದಲ್ಲಿ ಹಿಂದಿನ ಬಾಕಿಯನ್ನು ಹಾಗೂ ನವೀಕರಣ ಶುಲ್ಕವನ್ನು ಆನ್‌ಲೈನ್‌ನಲ್ಲಿ ಪಾವತಿಸುವಂತೆ ಸೂಚಿಸಲಾಗಿದೆ. ತಪ್ಪಿದ್ದಲ್ಲಿ ಪಾಲಿಕೆಯ ಆರೋಗ್ಯ ನಿರೀಕ್ಷಕರು ಸ್ಥಳ ತನಿಖೆ




ನಡೆಸಿ ಉದ್ದಿಮೆ ಪರವಾನಿಗೆ ಇಲ್ಲದ ಹಾಗೂ ಈವರೆಗೂ ನವೀಕರಣ ಮಾಡದ ಉದ್ದಿಮೆದಾರರಿಗೆ ನಿಯಾಮಾನುಸಾರ ಹೆಚ್ಚುವರಿ ದಂಡ ವಿಧಿಸಲಿದ್ದಾರೆ. ಹೆಚ್ಚಿನ ಮಾಹಿತಿಗೆ ದೂ.ಸಂ: 6364016555 ಸಂಪರ್ಕಿಸಬಹುದು ಎಂದು ಮಹಾನಗರಪಾಲಿಕೆ ಆಯುಕ್ತರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.


## ಅಧಿಕಾರಿಗಳ ಜೊತೆ ಶಾಸಕ ವೇದವ್ಯಾಸ ಕಾಮತ್ ಸಭೆ




ಮಂಗಳೂರು: ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ, ಮಳೆಯಿಂದ ಉಂಟಾಗಿರುವ ಅವ್ಯವಸ್ಥೆಗಳ ಸಹಿತ ಜನಸಾಮಾನ್ಯರು ಅನುಭವಿಸುತ್ತಿರುವ ಅನೇಕ ಸಮಸ್ಯೆಗಳ ಬಗ್ಗೆ ಪಾಲಿಕೆ ಆಯುಕ್ತರು ಹಾಗೂ ಅಧಿಕಾರಿಗಳೊಂದಿಗೆ ಶಾಸಕ ವೇದವ್ಯಾಸ ಕಾಮತ್ ತುರ್ತು ಸಭೆ ನಡೆಸಿದರು. ಪಾಲಿಕೆ ವ್ಯಾಪ್ತಿಯಲ್ಲಿ ವಿಪರೀತ ಮಳೆ ಸುರಿದಿದ್ದರೂ ಜನರಿಗೆ ಕುಡಿಯುವ ನೀರಿನ ಸಮಸ್ಯೆ ತಪ್ಪಿಲ್ಲ. ಇನ್ನೊಂದೆಡೆ ರಾಜಕಾಲುವೆಗಳಲ್ಲಿ ಸಮರ್ಪಕವಾಗಿ ಹೂಳೆತ್ತದಿರುವ ಕಾರಣ ಮನೆಗಳಿಗೆ ಮಳೆ ನೀರು ನುಗ್ಗಿ ಜನ ಸಾಮಾನ್ಯರು ತೀವ್ರ ಸಂಕಷ್ಟ ಅನುಭವಿಸುವಂತಾಗಿದೆ. ಮಳೆಯಿಂದ ತೊಂದರೆಗೀಡಾದವರಿಗೆ ಪಾಲಿಕೆ ವತಿಯಿಂದ ಯಾವುದೇ ನೆರವು ಸಿಗುತ್ತಿಲ್ಲ. ಕಸ ವಿಲೇವಾರಿಯ ಅವ್ಯವಸ್ಥೆಯ ಬಗ್ಗೆಯೂ ಜನರಿಂದ ದೂರುಗಳು ಬರುತ್ತಿವೆ. ಬಲ್ಲಾಳ್‌ಬಾಗ್ ಬಳಿಯ ಶಿಥಿಲಗೊಂಡಿರುವ ರಾಜಕಾಲುವೆಯ ಸೇತುವೆಯಿಂದ ನೀರು ಸರಾಗವಾಗಿ ಹರಿಯದೆ ಅದರಿಂದಲೂ ಕೃತಕ ನೆರೆ ಸೃಷ್ಟಿಯಾಗುತ್ತಿದೆ ಎಂದು ಶಾಸಕರು ಅಧಿಕಾರಿಗಳ ಗಮನ ಸೆಳೆದರಲ್ಲದೆ ಅಧಿಕಾರಿಗಳು ಯಾವುದನ್ನೂ ಹಗುರವಾಗಿ ಪರಿಗಣಿಸದೆ ಜನರ ಸಮಸ್ಯೆಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

## ಬಿಜೆಪಿಗರಿಂದ ಪೊಲೀಸರ ನೈತಿಕ ಸ್ಥೈರ್ಯ ಕುಂದಿಸುವ ಕೆಲಸ – ಐವನ್ ಡಿಸೋಜ

ಮಂಗಳೂರು: ಬಿಜೆಪಿಯ ರಾಜ್ಯ ಮುಖಂಡರು ದ.ಕ.ಜಿಲ್ಲೆಯ ಪೊಲೀಸ್ ಇಲಾಖೆಯ ನೈತಿಕ ಸ್ಥೈರ್ಯ ಕುಂದಿಸುವ ಕೆಲಸ ಮಾಡುತ್ತಿದ್ದಾರೆ ಎಂದು ವಿಧಾನ ಪರಿಷತ್ ಶಾಸಕ ಐವನ್ ಡಿಸೋಜ ಆರೋಪಿಸಿದ್ದಾರೆ. ಪ್ರತಿಪಕ್ಷ ನಾಯಕರು, ಬಿಜೆಪಿ ರಾಜ್ಯಾಧ್ಯಕ್ಷರ ಸಹಿತ ಹಲವು ಮುಖಂಡರು ಸೋಮವಾರ ದ.ಕ. ಜಿಲ್ಲೆಗೆ ಆಗಮಿಸಿ ಪೊಲೀಸ್ ಅಧಿಕಾರಿಗಳಿಗೆ ಬೆದರಿಕೆ ಹಾಕಿದ ಧಾಟಿಯಲ್ಲಿ ಮಾತನಾಡಿದ್ದಾರೆ. ಕಾನೂನು ಪ್ರಕಾರ ಕಾರ್ಯಾಚರಿಸಲು ಪೊಲೀಸರಿಗೆ ಅವಕಾಶ ಕಲ್ಪಿಸುವ ಬದಲು ಬೆದರಿಕೆ ದಾಟಿಯಲ್ಲಿ ಮಾತನಾಡಿರವುದು ಸರಿಯಲ್ಲ. ರಾಜ್ಯದಲ್ಲಿ ಸರಕಾರ ಬಿಜೆಪಿ ಇರಲಿ, ಕಾಂಗ್ರೆಸ್ ಇರಲಿ. ಪೊಲೀಸ್ ಇಲಾಖೆ ಅವರ ಕೆಲಸ ಮಾಡುತ್ತಾರೆ. ತಮಗೆ ಬೇಕಾದ ಹಾಗೆ ಮಾಡಿಲ್ಲ ಅಂತ ಬಿಜೆಪಿಗರು ತಕರಾರು




ತೆಗೆಯುವುದರಲ್ಲಿ ಅರ್ಥವಿಲ್ಲ ಎಂದರು. ಪ್ರವೀಣ್ ನೆಟ್ಟಾರು ಬಳಿಕ ಯಾವೆಲ್ಲಾ ಕೊಲೆಗಳಾಗಿವೆಯೋ ಅದನ್ನೆಲ್ಲಾ ಎನ್‌ಐಎಗೆ ವಹಿಸಲು ಸಂಸದರು ಆಸಕ್ತಿ ವಹಿಸಲಿ. ಅದು ಬಿಟ್ಟು ಕೇವಲ ಸುಹಾಸ್ ಶೆಟ್ಟಿಯ ಕೊಲೆ ಪ್ರಕರಣವನ್ನು ಮಾತ್ರ ಯಾಕೆ ಎನ್‌ಐಎಗೆ ವಹಿಸಿರುವುದು? ಹೀಗೆ ತಾರತಮ್ಯ ಮಾಡುವುದು ಎಷ್ಟು ಸರಿ ಎಂದು ಐವನ್ ಡಿಸೋಜ ಪ್ರಶ್ನಿಸಿದರು.

## ಕೇಂದ್ರ ಸರಕಾರದ ತಾರತಮ್ಯ: ಹರೀಶ್ ಕುಮಾರ್




ಮಂಗಳೂರು : ದಕ್ಷಿಣ ಕನ್ನಡದಲ್ಲಿ ನಡೆದ ಮೂರು ಕೊಲೆ ಪ್ರಕರಣಗಳಲ್ಲಿ ಸುಹಾಸ್ ಶೆಟ್ಟಿ ಕೊಲೆ ಪ್ರಕರಣವನ್ನು ಮಾತ್ರ ಎನ್‌ಐಎಗೆ ನೀಡಲಾಗಿದ್ದು, ಉಳಿದ ಎರಡು ಪ್ರಕರಣಗಳನ್ನು ಯಾಕೆ ಎನ್‌ಐಎಗೆ ನೀಡಿಲ್ಲ ಎಂದು ದ.ಕ.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹರೀಶ್ ಕುಮಾರ್ ಪ್ರಶ್ನಿಸಿದ್ದಾರೆ. ಕೇಂದ್ರ ಸರಕಾರ ಕೊಲೆ ಪ್ರಕರಣದಲ್ಲಿ ತಾರತಮ್ಯ ನೀತಿಯನ್ನು ಅನುಸರಿಸುತ್ತಿದೆ. ರಾಜಕೀಯ ದೃಷ್ಟಿ ಯಿಂದ ಕೊಲೆ ಪ್ರಕರಣವನ್ನು ನೋಡುತ್ತಿದೆ ಹೊರತು ನಿಜವಾದ ನ್ಯಾಯ ಒದಗಿಸಲು ಕೇಂದ್ರ ಸರಕಾರ ಮುಂದಾಗುತ್ತಿಲ್ಲ ಎಂದು ಹರೀಶ್ ಕುಮಾರ್ ಅಪಾದಿಸಿದ್ದಾರೆ. ಕೊಲೆಯಾದವರಿಗೆ ನೈಜ ನ್ಯಾಯ ದೊರಕಿಸಬೇಕಾದರೆ ಕೇಂದ್ರ ಸರಕಾರ ಈ ತಾರತಮ್ಯದ ನೀತಿಯನ್ನು ಬಿಟ್ಟು ಪ್ರಾಮಾಣಿಕವಾದ ತನಿಖೆಗೆ ಮುಂದಾಗಲಿ ಎಂದು ಅವರು ಆಗ್ರಹಿಸಿದ್ದಾರೆ. ಕೇವಲ ಒಂದು ಪ್ರಕರಣವನ್ನು ನೀಡುವ ಮೂಲಕ ಕೇಂದ್ರ ಸರಕಾರ ಜನರಲ್ಲಿ ಸಂಶಯ ಹಾಗೂ ತಪ್ಪು ಅಭಿಪ್ರಾಯವನ್ನು ಮೂಡಿಸುವ ಮೂಲಕ ಸಂವಿಧಾನ ವಿರೋಧಿ ನಡೆಯನ್ನು ಅನುಸರಿಸುತ್ತಿದೆ ಎಂದು ಅವರ ಅಭಿಪ್ರಾಯಿಸಿದ್ದಾರೆ.

## ಉಡುಪಿಯಲ್ಲಿ ಅನ್ನಭಾಗ್ಯದ ಅಕ್ಕಿ ಅಕ್ರಮ ದಾಸ್ತಾನು ಪತ್ತೆ

ಉಡುಪಿ: ಹಿರಿಯಡ್ಕದ ಬೊಮ್ಮರಬೆಟ್ಟು ಗ್ರಾಮದ ಮಾಂಬೆಟ್ಟು ಎಂಬಲ್ಲಿ ಸರಕಾರದ ಉಚಿತ ಅನ್ನ ಭಾಗ್ಯ ಯೋಜನೆಯ ಅಕ್ಕಿಯನ್ನು ಸಾರ್ವಜನಿಕರಿಂದ ಖರೀದಿಸಿ ದಾಸ್ತಾನು ಇಟ್ಟಿರುವ ಆರೋಪದಲ್ಲಿ ಓರ್ವನನ್ನು ಹಿರಿಯಡ್ಕ ಪೊಲೀಸರು ಬಂಧಿಸಿದ್ದಾರೆ. ವಾಸುದೇವ ಪ್ರಭು (56) ಬಂಧಿತ ಆರೋಪಿ. ಈತನಿಗೆ ಸೇರಿದ ಪ್ರಭು ಜನರಲ್ ಸ್ಟೋರ್ ನಲ್ಲಿ ಸರಕಾರದ ಉಚಿತ ಅನ್ನಭಾಗ್ಯ ಯೋಜನೆಗೆ ಸಂಬಂಧಿಸಿದ ಅಕ್ಕಿಯನ್ನು ಸಾರ್ವಜನಿಕರಿಂದ ಖರೀದಿಸಿ ದಾಸ್ತಾನು ಇಟ್ಟಿದ್ದೆನ್ನಲಾಗಿದೆ. ಈ ಬಗ್ಗೆ ಖಚಿತ ಮಾಹಿತಿಯಂತೆ ಆಹಾರ ನಿರೀಕ್ಷಕರು ಮತ್ತು ಹಿರಿಯಡ್ಕ ಪೊಲೀಸರು ದಾಳಿ ಮಾಡಿ, ಒಟ್ಟು 131 ಪ್ಲಾಸ್ಟಿಕ್ ಚೀಲಗಳಲ್ಲಿದ್ದ 1,27,880 ರೂ. ಮೌಲ್ಯದ ಒಟ್ಟು 55.60 ಕ್ವಿಂಟಾಲ್ ಅಕ್ಕಿಯನ್ನು



ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಯನ್ನು ಬಂಧಿಸಿ ಪೊಲೀಸರು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿದೆ. ಈ ಬಗ್ಗೆ ಹಿರಿಯಡ್ಕ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಂಯೋಜಿತ ಡಿಪಿಆರ್‌ಗೆ ಸಲಹೆ – ಕ್ಯಾಪ್ಟನ್ ಚೌಟ




ಮಂಗಳೂರು: ಮಂಗಳೂರು-ಬೆಂಗಳೂರು ನಡುವೆ ಅತ್ಯಂತ ಕಡಿಮೆ ಅವಧಿಯಲ್ಲಿ ಪ್ರಯಾಣಿಸುವ ಬಹುನಿರೀಕ್ಷಿತ ಹೈಸ್ಪೀಡ್ ಎಕ್ಸ್‌ಪ್ರೆಸ್ ಕಾರಿಡಾರ್ ಯೋಜನೆ ಕಾರ್ಯಗತವಾಗುವ ಪ್ರಕ್ರಿಯೆ ವೇಗ ಪಡೆದುಕೊಂಡಿದ್ದು, ಹೆದ್ದಾರಿ ಸಚಿವಾಲಯದಿಂದ ಟೆಂಡರ್ ಪ್ರಕ್ರಿಯೆ ಈಗಾಗಲೇ ಮುಗಿದಿದ್ದು, ಶೀಘ್ರದಲ್ಲೇ ವಿಸ್ತೃತ ಯೋಜನಾ ವರದಿ(ಡಿಪಿಆರ್) ತಯಾರಿಸುವ ಕಾರ್ಯ ಪ್ರಾರಂಭವಾಗಲಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ.ಬ್ರಿಜೇಶ್ ಚೌಟ ತಿಳಿಸಿದ್ದಾರೆ. ಮಂಗಳೂರು-ಬೆಂಗಳೂರು ಹೈಸ್ಪೀಡ್ ಕಾರಿಡಾರ್ ಯೋಜನೆ ಬಗ್ಗೆ ಮಾಹಿತಿ ನೀಡಿರುವ ಕ್ಯಾ. ಚೌಟ, ಮಂಗಳೂರು-ಬೆಂಗಳೂರು ನಡುವೆ ಅತ್ಯಂತ ವೇಗದ ಕಾರಿಡಾರ್ ರಸ್ತೆ ನಿರ್ಮಾಣದ ಕುರಿತಂತೆ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಂದ ಪತ್ರ ಬಂದಿದ್ದು, ಈ ಯೋಜನೆಯ ಕುರಿತು ವಿಸ್ತೃತ ಯೋಜನಾ ವರದಿ ಸಿದ್ಧಪಡಿಸುವುದಕ್ಕೆ ಕಳೆದ ಏ.30ರಂದು ಗುತ್ತಿಗೆ ನೀಡಲಾಗಿದ್ದು, ಈ DPR ಸಿದ್ಧಪಡಿಸಲು ಸರಿಸುಮಾರು 18 ತಿಂಗಳು ತೆಗೆದುಕೊಳ್ಳುವ ನಿರೀಕ್ಷೆಯಿದೆ. ಹೀಗಿರುವಾಗ, ಮಂಗಳೂರು ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ವಾಣಿಜ್ಯ ಚಟುವಟಿಕೆ ಸೇರಿದಂತೆ ಸಮಗ್ರ ಅಭಿವೃದ್ಧಿಗೆ ಪೂರಕವಾಗಿರುವ ಯೋಜನೆ ಜಾರಿಗೆ ಮಹತ್ವದ ಹೆಜ್ಜೆಯಿರಿಸಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ಸರ್ಕಾರ, ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹಾಗೂ ಸಂಬಂಧಪಟ್ಟ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಧನ್ಯವಾದ ಸಲ್ಲಿಸುವುದಾಗಿ ಹೇಳಿದ್ದಾರೆ.

## ಹಿಂದೂ ಕಾರ್ಯಕರ್ತರ ಜೊತೆ ನಾವಿದ್ದೇವೆ–ಬಿಜೆಪಿ ನಿಯೋಗ

ಮಂಗಳೂರು : ಶಾಸಕ ಅರವಿಂದ್ ಬೆಲ್ಲದ್, ಛಲವಾದಿ ನಾರಾಯಣ ಸ್ವಾಮಿ ವಿರೋಧ ಪಕ್ಷ ನಾಯಕ ಆರ್. ಅಶೋಕ್, ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ, ರಾಜ್ಯಾಧ್ಯಕ್ಷ ವಿಜಯೇಂದ್ರ, ರವಿ ಕುಮಾರ್ ಮತ್ತು ಹಲವು ನಾಯಕರನ್ನು ಒಳಗೊಂಡ ಬಿಜೆಪಿ ನಿಯೋಗ ಇಂದು ಮಂಗಳೂರಿಗೆ ಭೇಟಿ ನೀಡಿದ್ದು, ಹಿಂದೂ ಕಾರ್ಯಕರ್ತರ ಜೊತೆ ಚರ್ಚೆನಡಿಸಿದ ನಂತರ ಜಿಲ್ಲಾಧಿಕಾರಿ ಮುಗಿಲನ್ ಅವರನ್ನು ಭೇಟಿಯಾಗಿ ದ.ಕ.ಜಿಲ್ಲೆಯಲ್ಲಿ ಇತ್ತೀಚೆಗೆ ನಡೆಯುತ್ತಿರು ವಿದ್ಯಮಾನದ ಬಗ್ಗೆ ಚರ್ಚೆ ನಡೆಸಿತು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಬಿಜೆಪಿ ರಾಜ್ಯಧ್ಯಕ್ಷ ಬಿ.ವೈವಿಜಯೇಂದ್ರ ಕಾನೂನು ಸುವ್ಯವಸ್ಥೆ ನಿರ್ವಹಣೆ ನೆಪದಲ್ಲಿ ಪೊಲೀಸರ ಮೂಲಕ ಗೂಂಡಾವರ್ತನೆ, ಗೂಂಡಾಗಿರಿ ನಡೆಸ್ತಾ ಇದೆ. ಸುಳ್ಯ, ಪುತ್ತೂರಿನಲ್ಲಿ ರಾತ್ರಿ 3ಗಂಟೆಗೆ ಹೋಗಿ ಬಾಗಿಲು ತಟ್ಟುವಂಥದ್ದು,



ಕಾರ್ಯಕರ್ತರು ಮನೆಯಲ್ಲಿ ಇಲ್ಲದೇ ಇದ್ರೆ ರಿವಾಲ್ವರ್ ತೋರಿಸಿ ಬೆದರಿಸುವುದು ನಡೆಯುತ್ತಿದೆ. ಪಾಕಿಸ್ತಾನದವರಿದ್ದರೆ ಕಳಿಸಿಅಂದ್ರೆ ಆಗಲ್ಲ ಅಂತಾರೆ. ಭಾರತ್ ಮಾತಾಕಿ ಜೈ ಎನ್ನುವವರಿಗೂ ಪಾಕ್ ಜಿಂದಾಬಾದ್ ಎನ್ನುವವರಿಗೂ ಒಂದೇ ಕಾನೂನು. ದೇಶ ವಿರೋಧಿಗಳನ್ನೂ, ದೇಶಪ್ರೇಮಿಗಳನ್ನು ಒಂದೇ ತಕ್ಕಡಿಯಲ್ಲಿ ತೂಗಬೇಡಿ ಅಂತ ಹೇಳಿದ್ದೇವೆ. ಬಿಜೆಪಿ ಕಾರ್ಯಕರ್ತರಿಗೆ ನಾವಿದ್ದೇವೆ ಎಂದು ಹೇಳಿದರು.

## ದ್ವೇಷ ಬಿತ್ತುವ ಮತಗ್ರಂಥಗಳ ಮೇಲೆ ಕ್ರಮ ಯಾವಾಗ–ಸಿ.ಟಿ.ರವಿ




ಮಂಗಳೂರು: ಫೇಸ್ ಬುಕ್, ವಾಟ್ಸ್ ಆಪ್ ನಂತಹ ಸಾಮಾಜಿಕ ಮಾಧ್ಯಮಗಳಲ್ಲಿ ದ್ವೇಷ ಬಿತ್ತುವವರ ಮೇಲೆ ಕ್ರಮ ಕೈಗೊಳ್ಳುತ್ತಿರುವುದು ಒಳ್ಳೆಯದೇ. ಆದರೆ, ಕೋಮುವಾದ ಮತ್ತು ದ್ವೇಷವನ್ನೇ ಬಿತ್ತುವ ಮತಗ್ರಂಥಗಳ ಮೇಲೆ ಕ್ರಮ ಯಾವಾಗ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಪ್ರಶ್ನಿಸಿದ್ದಾರೆ. ಇಂದು ನಗರದ ಬಿಜೆಪಿ ಕಛೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಕೋಮುವಾದದ ಮೂಲವು ಮತ ಗ್ರಂಥಗಳಲ್ಲೇ ಇದೆ. 'ಜಿಹಾದ್'ಗೆ ಕರೆ ನೀಡುವ ಮತಗ್ರಂಥ ಕಾಫೀರರನ್ನು ಹೊಡೆಯಿರಿ ಎಂದೂ ಹೇಳುತ್ತದೆ. ಆ ಮತಗ್ರಂಥದ ಮೇಲೆ ಕ್ರಮ ಕೈಗೊಂಡರೆ ಭಾರತದಲ್ಲಿ ಮಾತ್ರವಲ್ಲ ಜಗತ್ತಿನಲ್ಲೇ ಶಾಂತಿ ನೆಲೆಸುತ್ತದೆ ಎಂದು ಸಲಹೆ ನೀಡಿದರು. 'ಕಾಂಗ್ರೆಸ್ ಮುಖಂಡರು ಮತಬ್ಯಾಂಕ್ ರಾಜಕಾರಣ ಮಾಡಬಾರದು. ಸಮಾಜದಲ್ಲಿ ಶಾಂತಿ ನೆಲೆಸಬೇಕೆಂಬ ನಿಜವಾದ ಕಳಕಳಿ ಅವರಿಗಿದ್ದರೆ, ಮತೀಯ ದ್ವೇಷ ಬಿತ್ತುವ ಮತಗ್ರಂಥಗಳನ್ನು ನಿಷೇಧಿಸಿ, ಅವುಗಳು ಜಾಗತಿಕ ಕ್ಷೋಭೆಗೆ, ಭಯೋತ್ಪಾದನೆಗೆ ಎಷ್ಟು ಕೊಡುಗೆ ನೀಡಿವೆ ಎಂದು ವಿಮರ್ಶೆ ಮಾಡಲಿ. ಆಗ ಕೋಮುವಾದಿಗಳು ಯಾರು ಎಂಬ ಸತ್ಯ ಅರ್ಥವಾಗುತ್ತದೆ. ಆ ಸತ್ಯ ಹೇಳುವುದಕ್ಕೆ ಅವರಿಗೆ ಧೈರ್ಯ ಇದೆಯೇ' ಎಂದು ಪ್ರಶ್ನಿಸಿದ್ದಾರೆ.

## ಭರತ್ ಕುಮ್ಡೇಲ್‌ರನ್ನು ಸಿಲುಕಿಸುವ ಹುನ್ನಾರ – ವಿ. ಎಚ್. ಪಿ.

ಮಂಗಳೂರು: ಬಂಟ್ವಾಳ ಕೊಳ್ತಮಜಲ್ ರೆಹಮಾನ್ ಹತ್ಯೆ ಪ್ರಕರಣದಲ್ಲಿ ಭರತ್ ಕುಮ್ಡೇಲ್ ಅವರನ್ನು ಸಿಲುಕಿಸಲು ಪೊಲೀಸ್ ಇಲಾಖೆ ಪ್ರಯತ್ನಿಸುತ್ತಿದೆ. ಈಗಾಗಲೇ ಭರತ್ ಕುಮ್ಡೇಲ್ ರವರ ಮನೆಯ ಮೇಲೆ ದಾಳಿ ಮಾಡಿ ಶೋಧ ನಡೆಸಿದ್ದಾರೆ. ಮುಸ್ಲಿಮರ ಒತ್ತಡಕ್ಕೆ ಮಣಿದು ರಾಜ್ಯ ಸರಕಾರ ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿ ಹಿಂದೂ ಸಂಘಟನೆಯ ನಾಯಕರ, ಕಾರ್ಯಕರ್ತರ ಮೇಲೆ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹತ್ಯೆ ಪ್ರಕರಣದಲ್ಲಿ ಸಿಲುಕಿಸುವ ಹುನ್ನಾರವನ್ನು ಬಜರಂಗದಳ ತೀವ್ರವಾಗಿ ಖಂಡಿಸುತ್ತದೆ ಎಂದು ಭಜರಂಗದಳ ಪ್ರಾಂತ ಸಂಯೋಜಕ ಪ್ರಭಂಜನ್ ಸೂರ್ಯ ಹೇಳಿದರು. ಬಜರಂಗ ದಳವನ್ನು ನಿಷೇಧ ಮಾಡಲು ಹೊರಟ ಕಾಂಗ್ರೆಸ್ ಸರಕಾರ ಕಳೆದ ಎರಡು ವರ್ಷಗ



ಳಿಂದ ನಿರಂತರವಾಗಿ ರಾಜ್ಯದಾದ್ಯಂತ ಕಾರ್ಯಕರ್ತರು, ಸಂಘಟನೆಯ ಪ್ರಮುಖರ ಮೇಲೆ ಸುಳ್ಳು ಕೇಸುಗಳನ್ನು ದಾಖಲಿಸಿ ಸಂಘಟನೆಯ ಹೆಸರನ್ನು ಕೆಡಿಸುವ ಪ್ರಯತ್ನವನ್ನು ಮಾಡುತ್ತಿದೆ. ಭರತ್ ಕುಮ್ಡೇಲ್ ರವರನ್ನು ಈ ಪ್ರಕರಣದಲ್ಲಿ ಸೇರಿಸಿದಲ್ಲಿ ಎಲ್ಲಾ ಜಿಲ್ಲಾ ಕೇಂದ್ರ ಗ್ರಾಮ ಗ್ರಾಮಗಳಲ್ಲಿ ಪ್ರತಿಭಟನೆ ನಡೆಸುವ ಎಚ್ಚರಿಕೆಯನ್ನು ಜಿಲ್ಲಾಡಳಿತಕ್ಕೆ ನೀಡುತ್ತೇವೆ ಎಂದರು.

## ಅಪಾಯದ ಪ್ರದೇಶಗಳನ್ನು ಗುರುತಿಸಲು ಜಿಲ್ಲಾಧಿಕಾರಿ ಸೂಚನೆ



ಮಂಗಳೂರು: ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತ್ ಹಾಗೂ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಪ್ರಾಕೃತಿಕ ವಿಕೋಪಗಳಿಂದ ಅಪಾಯದ ಸಾಧ್ಯತೆ ಇರುವ ಪ್ರದೇಶಗಳನ್ನು ಮುಂದಿನ ಎರಡು ದಿನಗಳಲ್ಲಿ ಗುರುತಿಸಿ ವರದಿ ನೀಡಲು ಜಿಲ್ಲಾಧಿಕಾರಿ ಮುಲ್ಲೈ ಮುಹಿಲನ್ ಸೂಚಿಸಿದ್ದಾರೆ. ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಭೂಕುಸಿತ, ನೀರು ಮುಳುಗಡೆ, ಸೇರಿದಂತೆ ತೀವ್ರ ಮಳೆಯಿಂದಾಗಿ ದುರಂತ ಘಟನೆಗಳು ನಡೆಯುವ ಸಾಧ್ಯತೆ ಇರುವ ಪ್ರದೇಶಗಳನ್ನು ಮೊದಲೇ ಗುರುತಿಸಬೇಕು. ರೆಡ್ ಅಲರ್ಟ್ ಅವಧಿಯಲ್ಲಿ ಅಲ್ಲಿನ ನಿವಾಸಿಗಳನ್ನು ಸ್ಥಳಾಂತರಿಸಲು ಕ್ರಮ ಕೈಗೊಳ್ಳಬೇಕು. ಅಪಾಯಗಳ ಬಗ್ಗೆ ಅಲ್ಲಿನ ನಿವಾಸಿಗಳಿಗೆ ನೋಟಿಸ್ ನೀಡಿ ತಿಳಿಸಬೇಕು. ಸ್ಥಳೀಯ ಮಟ್ಟದಲ್ಲಿ ವಿಪತ್ತು ನಿರ್ವಹಣಾ ಯೋಜನೆ ರಚಿಸಬೇಕು. ಸಂಬಂಧಪಟ್ಟ ತಹಶೀಲ್ದಾರ್ ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಪರಿಶೀಲಿಸಬೇಕು ಎಂದು ತಿಳಿಸಿದರು. ಪ್ರಾಕೃತಿಕ ದುರಂತದಲ್ಲಿ ನಡೆಯುವ ಜೀವಹಾನಿ ತಪ್ಪಿಸುವುದೇ ಮೊದಲ ಆದ್ಯತೆಯಾಗಿದೆ. ಸಂಭಾವ್ಯ ಭೂಕುಸಿತ ಅನಾಹುತ ಸ್ಥಳಗಳನ್ನು ಗುರುತಿಸದೆ ಅನಾಹುತ ಸಂಭವಿಸಿದರೆ ಆಯಾ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಸಿದರು.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## 1000 ಕಂತು ಪೂರೈಸಿದ 'ಪುಟ್ಟಕ್ಕನ ಮಕ್ಕಳು'

ಝೀ ಕನ್ನಡದ ಜನಪ್ರಿಯ ಧಾರಾವಾಹಿ ಪುಟ್ಟಕ್ಕನ ಮಕ್ಕಳು ಯಶಸ್ವಿಯಾಗಿ ಸಾವಿರ ಸಂಚಿಕೆ ಪೂರೈಸಿದ್ದು, ಆರಂಭದಿಂದ ಇಲ್ಲಿವರೆಗೂ ಪ್ರೇಕ್ಷಕರ ಪ್ರೀತಿ ಪಡೆದುಕೊಂಡಿದೆ. ಗಂಡನಿಂದ ವಂಚಿಳಾದ ಹೆಣ್ಣು ಕುಗ್ಗದೇ ಜೀವನ ಕಟ್ಟಿಕೊಂಡ ಕಥೆ. ಛಲವೊಂದಿದ್ದರೆ ಸಾಕು ಸಾಧಿಸಿ ತೋರಿಸಬಹುದು ಎಂಬುಸನ್ನು ಸಾಬೀತುಪಡಿಸಿದ ಕಥೆಯೇ ಪುಟ್ಟಕ್ಕನ ಮಕ್ಕಳು. ಜೆ.ಎಸ್ ಪ್ರೊಡಕ್ಷನ್ಸ್ ನಿರ್ಮಾಣ ಮಾಡಿ, ಜೀ ಕನ್ನಡದಲ್ಲಿ 13ನೇ ಡಿಸೆಂಬರ್ 2021ರಿಂದ ಪ್ರಸಾರವಾದ ಧಾರಾವಾಹಿ ಪುಟ್ಟಕ್ಕನ ಮಕ್ಕಳು. ಹೆಣ್ಣು ಮಕ್ಕಳ ಹೆತ್ತೋಳೂಎಲ್ಲ ದೇವರಿಗೂ ದೊಡ್ಡೋಳು ಎಂಬ ಶೀರ್ಷಿಕೆ ಗೀತೆಯಿಂದಲೇ ಎಲ್ಲರ ಮನಸೆಳೆದು, ಮೊದಲ ವಾರದ ರೇಟಿಂಗ್‌ನಲ್ಲಿ 13.5 ಟಿವಿಆರ್ ಗಳಿಸಿ ಭಾರತದಲ್ಲೇ ಅತಿ ಹೆಚ್ಚು ಓಪನಿಂಗ್ ಪಡೆದ ಧಾರಾವಾಹಿ ಎಂಬ ದಾಖಲೆ ಸೃಷ್ಟಿಸಿತು. ಆರೂರು ಜಗದೀಶ್‌ರವರ ಸಾರಥ್ಯದಲ್ಲಿ ಚಿತ್ರೀಕರಣಗೊಂಡ ಮೊದಲ ಕಂತುಗಳು 'ಸಣ್ಣ ಪರದೆಯ ದೊಡ್ಡ ಸಿನಿಮಾ' ಎಂಬ ಮನ್ನಣೆ ಗಳಿಸಿದವು. ನಿರ್ಮಾಪಕಿ ಸ್ಮಿತಾಜೆ ಶೆಟ್ಟಿಯವರ, ಜೆಎಸ್ ಪ್ರೊಡಕ್ಷನ್ಸ್ ಸಂಸ್ಥೆಯು 'ಶುಭ ವಿವಾಹ, ಜೋಡಿಹಕ್ಕಿ, ಜೊತೆ ಜೊತೆಯಲಿ'ಯಂತಹ ಯಶಸ್ವಿ ಧಾರಾವಾಹಿಗಳನ್ನು ನೀಡಿದ್ದು, ಸಾವಿರ ಸಂಚಿಕೆಗಳನ್ನು ಪೂರೈಸಿರುವ 'ಪುಟ್ಟಕ್ಕನ ಮಕ್ಕಳು' ಈ ಸಂಸ್ಥೆಯ ಮೈಲುಗಲ್ಲಾಗಿದೆ. ಉಮಾಶ್ರೀ, ಮಂಜು ಭಾಷಿಣಿ, ರಮೇಶ್ ಪಂಡಿತ್, ಸಾರಿಕಾ, ಗುರು ಹೆಗ್ಡೆಯಂತಹ ಹಿರಿಯ ಕಲಾವಿದರ ಜೊತೆಗೆ, ಧನುಷ್, ಅಕ್ಷರ, ವಿದ್ಯಾ, ಶಿಲ್ಪ, ಅನಿರೀಶ್ ಮೊದಲಾದ ಉದಯೋನ್ಮುಖ ಕಲಾವಿದರ ತಾರಾಗಣ ಹೊಂದಿರುವ ಪುಟ್ಟಕ್ಕನ ಮಕ್ಕಳು, ರಾಜ್ಯದ ಪ್ರತಿ ಮನೆಯ ಹಾಗೂ ಪ್ರತಿದಿನದ ಅವಿಭಾಜ್ಯ ಅಂಗವಾಗಿದೆ. ಈ ಸಾಧನೆಯಲ್ಲಿ ತೆರೆಯ ಹಿಂದಿನ ತಾಂತ್ರಿಕ ವರ್ಗದ ಶ್ರಮವೂ ಸಾಕಷ್ಟಿದೆ. ಬರಹಗಾರರಾದ ಸತ್ಯಕಿಯವರ ಚಿತ್ರಕಥೆ ಮತ್ತು ಸಂಭಾಷಣೆ ಈ ಧಾರಾವಾಹಿಯ ಜೀವಾಳ.



## ಸೃಜನ್ ಲೋಕೇಶ್ ಪ್ರಥಮ ನಿರ್ದೇಶನದ 'GST' ಸದ್ಯದಲ್ಲೇ ತೆರೆಗೆ

ಕನ್ನಡ ಚಿತ್ರರಂಗಕ್ಕೆ ಸಾಕಷ್ಟು ಯಶಸ್ವಿ ಚಿತ್ರಗಳನ್ನು ನೀಡಿರುವ ರಾಷ್ಟ್ರಪ್ರಶಸ್ತಿ ವಿಜೇತ ಸಂದೇಶ್ ನಾಗರಾಜ್ ಅವರು ಅರ್ಪಿಸುವ, ಸಂದೇಶ್ ಎನ್ ನಿರ್ಮಾಣದ ಹಾಗೂ ಸೃಜನ್ ಲೋಕೇಶ್ ನಾಯಕನಾಗಿ ನಟಿಸುವುದಲ್ಲದೆ, ಪ್ರಥಮ ಬಾರಿಗೆ ನಿರ್ದೇಶನವನ್ನು ಮಾಡಿರುವ "GST" ಚಿತ್ರವನ್ನು ವೀಕ್ಷಿಸಿದ ಪ್ರಾದೇಶಿಕ ಸೆನ್ಸಾರ್ ಮಂಡಳಿ U/A ಪ್ರಮಾಣ ಪತ್ರವನ್ನು ನೀಡಿದೆ. ಬಹುನಿರೀಕ್ಷಿತ ಈ ಚಿತ್ರ ಸದ್ಯದಲ್ಲೇ ತೆರೆಗೆ ಬರಲಿದೆ. "GST" ಚಿತ್ರ ಹಲವು ವಿಶೇಷತೆಗಳನ್ನೊಳಗೊಂಡಿದೆ. ಈ ಚಿತ್ರದಲ್ಲಿ ನಿರ್ಮಾಪಕ ಸಂದೇಶ್ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಅವರ ಪಾತ್ರ ಏನೆಂಬುದ್ದನ್ನು ನಿರ್ದೇಶಕ ಸೃಜನ್ ಲೋಕೇಶ್ ಗುಪ್ತವಾಗಿಟ್ಟಿದ್ದಾರೆ. ಇನ್ನು ಈ ಚಿತ್ರದಲ್ಲಿ ಗಿರಿಜಾ ಲೋಕೇಶ್, ಸೃಜನ್ ಲೋಕೇಶ್ ಹಾಗೂ ಸೃಜನ್ ಅವರ ಪುತ್ರ ಸುಕೃತ್ ಮೂರು ಜನ ಅಭಿನಯಿಸಿದ್ದಾರೆ. ಅಜ್ಜಿ, ಮಗ ಹಾಗೂ ಮೊಮ್ಮಗ ಮೂರು ಜನರನ್ನು ಒಟ್ಟಿಗೆ ತೆರೆಯ ಮೇಲೆ ಈ ಚಿತ್ರದಲ್ಲಿ ನೋಡಬಹುದು. ತಮ್ಮ ನಿರ್ದೇಶನದ ಮೊದಲ ಚಿತ್ರದಲ್ಲೇ ಸೃಜನ್ ತಮ್ಮ ತಾಯಿ ಹಾಗೂ ಮಗನಿಗೆ ಆಕ್ಷನ್‌ಕಟ್ ಹೇಳಿದ್ದಾರೆ. ಮನೋರಂಜನೆಯೇ ಪ್ರಧಾನ ವಾಗಿರುವ "GST" ಚಿತ್ರಕ್ಕೆ "ಘೋಸ್ಟ್ ಇನ್ ಟ್ರಬಲ್" ಎಂಬ ಅಡಿಬರಹವಿದೆ. ಸೃಜನ್ ಲೋಕೇಶ್ ಅವರಿಗೆ ನಾಯಕಿಯಾಗಿ ರಜನಿ ಭಾರದ್ವಾಜ್ ನಟಿಸಿದ್ದಾರೆ. ಪ್ರಮೋದ್ ಶೆಟ್ಟಿ, ಗಿರಿಜಾ ಲೋಕೇಶ್, ಶೋಭ್‌ರಾಜ್, ಶರತ್ ಲೋಹಿತಾಶ್ವ, ನಿವೇದಿತಾ, ಅರವಿಂದ್ ರಾವ್, ತಬಲ ನಾಣಿ, ರವಿಶಂಕರ್ ಗೌಡ, ವಿನೋದ್ ಗೊಬ್ಬರಗಾಲ, ಮಾಸ್ಟರ್ ಸುಕೃತ್ ಮುಂತಾದವರು ಈ ಸಿನಿಮಾದ ತಾರಾ ಬಳಗದಲ್ಲಿದ್ದಾರೆ.



## ಸಾಯಿಪ್ರಕಾಶ್ ನಿರ್ದೇಶನದ 105ನೇ ಚಿತ್ರ

ಜೀವನದಲ್ಲಿ ಎದುರಾಗುವಂಥ ಹಲವಾರು ಸಮಸ್ಯೆಗಳಿಗೆ ಆತ್ಮಹತ್ಯೆ ಒಂದೇ ಪರಿಹಾರವಲ್ಲ ಎಂಬ ಉತ್ತಮ ಸಂದೇಶ ಇಟ್ಟುಕೊಂಡು ಶತ ಸಿನಿಮಾಗಳ ಸರದಾರ ಓಂಸಾಯಿ ಪ್ರಕಾಶ್ ಅವರು 'ಸೆಪ್ಟೆಂಬರ್ 10' ಎಂಬ ಚಿತ್ರವನ್ನು ನಿರ್ದೇಶನ ಮಾಡಿದ್ದಾರೆ. ಶ್ರೀದೇವಿ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ಶ್ರೀಮತಿ ರಾಜಮ್ಮ ಸಾಯಿಪ್ರಕಾಶ್ ಅವರು ನಿರ್ಮಾಣ ಮಾಡಿರುವ ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು. ಈ ಚಿತ್ರಕ್ಕೆ ಬೆನ್ನೆಲುಬಾಗಿ ನಿಂತಿರುವ, ಕೋವಿಡ್ ಸಮಯದಲ್ಲಿ ಲಕ್ಷಾಂತರ ಜನರಿಗೆ ಸಹಾಯ ಮಾಡಿದ ಡಾ.ಎಸ್. ರಾಜು ಈ ಚಿತ್ರದ ಕಂಟೆಂಟ್ ಆಧರಿಸಿ ಮಾಡಿರುವ ತುಣುಕುಗಳು ಹಾಗೂ ಮೇಕಿಂಗ್ ವಿಡಿಯೋ ಟೀಸರ್ಗೆ ಚಾಲನೆ ನೀಡಿದರು. ಬಿಬಿಎಂಪಿ ಮಾಜಿ ಸದಸ್ಯರೂ ಆದ ಡಾ. ಎಸ್. ರಾಜು ಅವರು ಚಿತ್ರದ ಕಾನ್ಸೆಪ್ಟ್ ಹಾಗೂ ಅದರಲ್ಲಿರುವ ಮೆಸೇಜ್ ಎಲ್ಲಾ ಜನರಿಗೂ ತಲುಪಬೇಕೆಂಬ ಸದುದ್ದೇಶದಿಂದ ಈ ಚಿತ್ರದ ಬಿಡುಗಡೆಗೆ ತಮ್ಮ ಸಹಕಾರ ನೀಡುತ್ತಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಸಾಯಿಪ್ರಕಾಶ್ ಈಗಿನ ಕಾಲದಲ್ಲಿ ಒಂದು ಸಿನಿಮಾ ಮಾಡುವುದೇ ಕಷ್ಟ, ಮಾಡಿದರೂ ಅದನ್ನು ಜನರಿಗೆ ತಲುಪಿಸುವುದು ಇನ್ನೂ ಕಷ್ಟ. ನಾನು 2020ರಲ್ಲಿ ಸೆಪ್ಟೆಂಬರ್ 10 ಎಂಬ ಟೈಟಲ್ ಇಟ್ಟುಕೊಂಡು ಸಿನಿಮಾ ಸ್ಟಾರ್ಟ್ ಮಾಡಿದೆ ಎಂದರು.



## ಗೋಲ್ಡನ್‌ಸ್ಟಾರ್ ಗಣೇಶ್ ಅಭಿನಯದ 'ಪಿನಾಕ' ಚಿತ್ರಕ್ಕೆ ಚಿತ್ರೀಕರಣ

ಪೀಪಲ್ ಮೀಡಿಯಾ ಫ್ಯಾಕ್ಟರಿ ಲಾಂಛನದಲ್ಲಿ ವಿಶ್ವಪ್ರಸಾದ್ ಅವರು ಅದ್ದೂರಿಯಾಗಿ ನಿರ್ಮಿಸುತ್ತಿರುವ, ನೃತ್ಯ ನಿರ್ದೇಶಕ ಧನಂಜಯ್ ಚೊಚ್ಚಲ ನಿರ್ದೇಶನದ ಹಾಗೂ ಗೋಲ್ಡನ್ ಸ್ಟಾರ್ ಗಣೇಶ್ ಅಭಿನಯದ 'ಪಿನಾಕ' ಚಿತ್ರದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ನೆಲಮಂಗಲ ಬಳಿ ಚಿತ್ರಕ್ಕಾಗಿ ಆರು ಎಕರೆ ಪ್ರದೇಶದಲ್ಲಿ ದೊಡ್ಡ ಸೆಟ್ ಹಾಕಲಾಗಿದೆ. ಸೆಟ್ ಎಂದರೆ ಅದು 500 ವರ್ಷಗಳ ಹಿಂದಿನ ದೇವಗಿರಿ ಎಂಬ ಸಾಮ್ರಾಜ್ಯದ ಸೆಟ್. ಒಂದು ನಗರವನ್ನೇ ನಿರ್ಮಿಸಲಾಗಿದ್ದು, ಮಧ್ಯದಲ್ಲೊಂದು ಅರ್ಧನಾರೀಶ್ವರನ ಪ್ರತಿಮೆ ನಿಲ್ಲಿಸಲಾಗಿದೆ. ಕಳೆದ 32 ದಿನಗಳಿಂದ ಚಿತ್ರೀಕರಣ ನಡೆಯುತ್ತಿದ್ದು, 15 ದಿನಗಳ ಚಿತ್ರೀಕರಣ ನಡೆಯಲಿದೆಯಂತೆ. ಈ ಸೆಟ್ ಚಿತ್ರದಲ್ಲಿ ಮಹತ್ವದ ಪಾತ್ರ ವಹಿಸುವುದರಿಂದ, ಚಿತ್ರತಂಡ ಈ ಸೆಟ್ ಹೇಗಿದೆ ಎಂದು ಗೌಪ್ಯವಾಗಿಟ್ಟಿದೆ.



## 'ದೂರ ತೀರ ಯಾನ' ಜುಲೈ 11ಕ್ಕೆ ತೆರೆಗೆ

ಡಿ.ಕ್ರಿಯೇಷನ್ಸ್ ಮೂಲಕ ಕನ್ನಡ ಚಿತ್ರರಂಗಕ್ಕೆ ಈಗಾಗಲೇ ಸಾಕಷ್ಟು ಸದಭಿರುಚಿಯ ಚಿತ್ರಗಳನ್ನು ನೀಡಿರುವ ದೇವರಾಜ್ ಆರ್. ನಿರ್ಮಾಣದ ಹಾಗೂ 'ಹರಿವು', 'ನಾತಿಚರಾಮಿ', 'ಆಕ್ಟ್ 1978', '19.20.21'ನಂತಹ ಜನಮೆಚ್ಚುಗೆ ಪಡೆದ ಚಿತ್ರಗಳ ನಿರ್ದೇಶಕ ಮಂಸೋರೆ ನಿರ್ದೇಶಿಸಿರುವ ಹಾಗೂ ವಿಜಯ್‌ಕೃಷ್ಣ-ಪ್ರಿಯಾಂಕ ಕುಮಾರ್ ನಾಯಕ- ನಾಯಕಿಯಾಗಿ ನಟಿಸಿರುವ 'ದೂರ ತೀರ ಯಾನ' ಚಿತ್ರದ ಶೀರ್ಷಿಕೆ ಗೀತೆ ಇತ್ತೀಚೆಗೆ ಬಿಡುಗಡೆಯಾಯಿತು. ಕಿರಣ್ ಕಾವೇರಪ್ಪ ಬರೆದು ಬಕ್ಕೇಶ್ ಹಾಗೂ ಕಾರ್ತಿಕ್ ಸಂಗೀತ ನೀಡಿರುವ ಹಾಗೂ ಬಕ್ಕೇಶ್-ಇಶಾ ಸುಚಿ ಅವರು ಹಾಡಿರುವ ಈ ಶೀರ್ಷಿಕೆ ಗೀತೆಯನ್ನು ನಿರ್ಮಾಪಕ ದೇವರಾಜ್ ಅವರ ಪುತ್ರ ಜಯರಾಮ್ ಬಿಡುಗಡೆ ಮಾಡಿದರು.



## 'ಎಕ್ಕ' ಸಿನಿಮಾದ ಬ್ಯಾಂಗಲ್ ಬಂಗಾರಿ ಸಾಂಗ್ ರಿಲೀಸ್

ಯುವ ರಾಜ್‌ಕುಮಾರ್ ನಾಯಕನಾಗಿ ನಟಿಸುತ್ತಿರುವ ಎಕ್ಕ ಸಿನಿಮಾದಿಂದ ಹೊಸ ಅಪ್ ಡೇಟ್ ಸಿಕ್ಕಿದೆ. ಟೈಟಲ್ ಟ್ರ್ಯಾಕ್ ಹಾಗೂ ಟೀಸರ್ ಮೂಲಕ ಕುತೂಹಲ ಹೆಚ್ಚಿಸಿರುವ ಚಿತ್ರತಂಡ ಇಂದು ಬ್ಯಾಂಗಲ್ ಬಂಗಾರಿ ಎಂಬ ಹೊಸ ಹಾಡನ್ನು ಅನಾವರಣ ಮಾಡಿದೆ. ಆನಂದ್ ಆಡಿಯೋ ಯೂಟ್ಯೂಬ್‌ನಲ್ಲಿ ಬ್ಯಾಂಗಲ್ ಬಂಗಾರಿ ಲಿರಿಕಲ್ ವಿಡಿಯೋ ಬಿಡುಗಡೆಯಾಗಿ ಪ್ರೇಕ್ಷಕರ ಮೆಚ್ಚುಗೆ ಪಡೆದುಕೊಳ್ಳುತ್ತಿದೆ. ನಾಯಕ ಯುವರಾಜ್ ಕುಮಾರ್ ಹಾಗೂ ನಾಯಕಿ ಸಂಜನಾ ಆನಂದ್ ಈ ಗೀತೆಗೆ ಹೆಜ್ಜೆ ಹಾಕಿದ್ದಾರೆ. ತನ್ನ ಇಷ್ಟದ ಹುಡ್ಗಿಯನ್ನು ಬ್ಯಾಂಗಲ್ ಬಂಗಾರಿ ಅಂತಾ ಕರೆಯುತ್ತಾ ನಾಯಕ ಕುಣಿದು ಕುಪ್ಪಳಿಸಿರುವ ಮೆಲೋಡಿ ಹಾಡು ಇದಾಗಿದೆ. ಹಾಡಿಗೆ ನಾಗಾರ್ಜುನ್ ಶರ್ಮಾ ಸಾಹಿತ್ಯ ಬರೆದಿದ್ದಾರೆ. ಮುರಳಿ ಮಾಸ್ಟರ್ ಅವರ ನೃತ್ಯ ಸಂಯೋಜನೆ, ಚರಣ್ ರಾಜ್ ಅವರ ಸಂಗೀತ ನೀಡಿದ್ದು, ಅಂತೋನಿ ದಾಸನ್ 'ಬ್ಯಾಂಗಲ್ ಬಂಗಾರಿ'ಗೆ ಕಂಠ ಕುಣಿಸಿದ್ದಾರೆ.



## 'ಬ್ರೋಕೋಡ್' ಮೂಲಕ ನಿರ್ಮಾಣಕ್ಕಿಳಿದ ತಮಿಳು ನಟ!

ತಮಿಳು ಚಿತ್ರರಂಗದ ಪ್ರತಿಭಾನ್ವಿತ ನಟ ರವಿ ಮೋಹನ್ ಹೊಸ ಸಿನಿಮಾ ಘೋಷಣೆ ಮಾಡಿದ್ದಾರೆ. ಬ್ರೋಕೋಡ್ ಎಂಬ ಚಿತ್ರ ಅನೌನ್ಸ್ ಮಾಡಿರುವ ಅವರೀಗ, ನಿರ್ಮಾಣದ ಜವಾಬ್ದಾರಿ ಕೂಡ ಹೊತ್ತುಕೊಂಡಿದ್ದಾರೆ. ಇತ್ತೀಚೆಗೆಷ್ಟೇ ತಮ್ಮದೇ ನಿರ್ಮಾಣ ಸಂಸ್ಥೆ ಬಗ್ಗೆ ಮಾಹಿತಿ ನೀಡಿದ್ದ ರವಿ ಮೋಹನ್ ಆ ಸಂಸ್ಥೆಯ ಚೊಚ್ಚಲ ಚಿತ್ರ ಯಾವುದು ಎಂಬ ಕುತೂಹಲಕ್ಕೆ ತೆರೆ ಎಳೆದಿದ್ದಾರೆ. ರವಿ ಮೋಹನ್ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಬ್ರೋಕೋಡ್‌ಗೆ ಅವರೇ ನಾಯಕ. ಡಿಕ್ಕಿಲೂನಾ ಮತ್ತು ವಡಕ್ಕುಪಟ್ಟಿ ರಾಮಸಾಮಿಯಂತಹ ಚಿತ್ರಗಳ ನಿರ್ದೇಶಕ ಕಾರ್ತಿಕ್ ಯೋಗಿ 'ಬ್ರೋಕೋಡ್' ಸಿನಿಮಾಗೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ರವಿಮೋಹನ್ ಜೊತೆಗೆ ಎಸ್‌ಜೆ ಸೂರ್ಯ ಹಾಗೂ ನಾಲ್ವರು ಪ್ರಮುಖ ನಟಿಯರು ಈ ಚಿತ್ರದಲ್ಲಿ ಅಭಿನಯಿಸಲಿದ್ದಾರೆ.



## ಟೀಸರ್‌ನಲ್ಲೇ ಮೋಡಿ ಮಾಡಿದ 'ಎಲ್ಟು ಮುತ್ತಾ'

ಹೈ5 ಸ್ಟುಡಿಯೋಸ್ ಲಾಂಛನದಲ್ಲಿ ಸತ್ಯ ಶ್ರೀನಿವಾಸನ್ ನಿರ್ಮಿಸಿರುವ, ರಾ.ಸೂರ್ಯ ಬರೆದು ನಿರ್ದೇಶಿಸಿರುವ ಹಾಗೂ ರಾ. ಸೂರ್ಯ-ಶೌರ್ಯ ಪ್ರತಾಪ್ ಪ್ರಮುಖ ಪಾತ್ರದಲ್ಲಿ ನಟಿಸಿರುವ 'ಎಲ್ಟು ಮುತ್ತಾ' ಚಿತ್ರದ ಟೀಸರ್ ಇತ್ತೀಚೆಗೆ ಬಿಡುಗಡೆಯಾಯಿತು. ಶೈಲಜಾ ವಿಜಯ್ ಕಿರಂಗದೂರ್, ಅಕ್ಷಯ್ ಗಂಗಾಧರ್ ಹಾಗೂ ಎಲ್.ವೈ.ರಾಜೇಶ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಟೀಸರ್ ಕುತೂಹಲ ಮೂಡಿಸಿದ್ದು, ಬಿಡುಗಡೆ ಆದ ಕ್ಷಣದಿಂದಲೇ ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದ್ದು, ಮೆಚ್ಚುಗೆ ಪಡೆಯುತ್ತಿದೆ. ಟೀಸರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. 'ಎಲ್ಟು ಮುತ್ತಾ', ಸಾವಿಗೆ ಡೋಲು ಹೊಡೆಯುವವರ ಸುತ್ತಲ್ಲಿನ ಕಥೆ. ಮುತ್ತಾ ಪಾತ್ರದಲ್ಲಿ ಶೌರ್ಯ ಪ್ರತಾಪ್ ಅಭಿನಯಿಸಿದ್ದಾರೆ.



## ಸಾಲುಮರದ ತಿಮ್ಮಕ್ಕನ ಪಾತ್ರದಲ್ಲಿ ನಟಿ ಸೌಜನ್ಯ ಒರಟ ಶ್ರೀ ನಿರ್ದೇಶನ

ವೃಕ್ಷಗಳನ್ನೇ ಮಕ್ಕಳಾನ್ನಾಗಿ ಕಂಡು ಲೆಕ್ಕವಿಲ್ಲದಷ್ಟು ಮರಗಳನ್ನು ಬೆಳೆಸಿ ಪೋಷಿಸಿ ಇಡೀ ಜಗತ್ತಿಗೆ ಮಾದರಿಯಾಗಿರುವ ವೃಕ್ಷಮಾತೆ ಪದ್ಮಶ್ರೀ ಸಾಲುಮರದ ತಿಮ್ಮಕ್ಕ ಅವರ ಜೀವನ ಚರಿತ್ರೆ ಈಗ ಸಿನಿಮಾ ರೂಪದಲ್ಲಿ ಬರಲಿದೆ. ಶ್ರೀಲಕ್ಷ್ಮಿ ವೆಂಕಟೇಶ್ವರ ಪಿಕ್ಚರ್ಸ್ ಬ್ಯಾನರ್ ಅಡಿಯಲ್ಲಿ ದಿಲೀಪ್ ಕುಮಾರ್ ಎಚ್. ಆರ್. ಸೌಜನ್ಯ ಡಿ.ವಿ, ಎ.ಸಂತೋಷ್ ಮುರಳಿ ಹಾಗೂ ಒರಟ ಶ್ರೀ ನಿರ್ಮಾಣದ ಈ ಚಿತ್ರ ಡಾ। ನೆಲ್ಲಿಕಟ್ಟೆ ಎಸ್. ಸಿದ್ದೇಶ್ ಅವರ 'ವೃಕ್ಷಮಾತೆ ಸಾಲುಮರದ ತಿಮ್ಮಕ್ಕ' ಕೃತಿ ಆಧಾರಿತವಾಗಿದೆ. 'ಒರಟ ಐ ಲವ್ ಯು' ಖ್ಯಾತಿಯ ನಿರ್ದೇಶಕ ಒರಟ ಶ್ರೀ ಮೊದಲ ಬಾರಿಗೆ ಕಲಾತ್ಮಕ ಚಿತ್ರಕ್ಕೆ ಆಕ್ಷನ್‌ಕಟ್ ಹೇಳು ತ್ತಿದ್ದು ನಟಿ ಸೌಜನ್ಯ ತಿಮ್ಮಕ್ಕನ ಪಾತ್ರದಲ್ಲಿ ನಟಿಸುತ್ತಿದ್ದಾರೆ.



## 'ದೇವಸಸ್ಯ' ಟೈಟಲ್ ಟೀಸರ್ ಬಿಡುಗಡೆ

ದೇವಸಸ್ಯ ಒಂದು ವಿಶಿಷ್ಠ ಕಥಾಹಂದರವನ್ನು ಹೇಳುವ ಹಾಗೂ ಅಪರೂಪದ ಗಿಡದ ಸುತ್ತ ನಡೆಯುವ ಘಟನೆಗಳ ಗುಚ್ಛ. ಬಹುತೇಕ ಉತ್ತರ ಕನ್ನಡದವರೇ ಸೇರಿ ಮಾಡಿರುವ ಪ್ಯಾನ್ ಇಂಡಿಯಾ ಚಿತ್ರವಿದು. ಕನ್ನಡ, ತೆಲುಗು, ಹಿಂದಿ ಸೇರಿದಂತೆ ಐದು ಭಾಷೆಗಳಲ್ಲಿ ದೇಶಾದ್ಯಂತ ತೆರೆಗೆ ಬರುತ್ತಿದೆ. ಅನಂತ ಫಿಲಂಸ್ ಅಡಿಯಲ್ಲಿ ಅನಂತಕುಮಾರ್‌ಹೆಗ್ಡೆ ಅವರು ನಿರ್ಮಾಣ ಮಾಡಿರೋ ಈ ಚಿತ್ರಕ್ಕೆ ಕಾರ್ತೀಕ್ ಭಟ್ ಆಕ್ಷನ್‌ಕಟ್ ಹೇಳಿದ್ದಾರೆ.






# ಕರಾವಳಿ ಭಾಗದ ಪ್ರೇಮಕಥೆ ‘ಮಾರ್ನಮಿ’



‘ಅನುರೂಪ’, ‘ಗಿಣಿರಾಮ’, ‘ನಿನಗಾಗಿ’ ಧಾರಾವಾಹಿಗಳ ಮೂಲಕ ಫೇಮಸ್ ಆಗಿರುವ ನಟ ರಿತ್ವಿಕ್ ಮಠದ್ ರಗಡ್ ಅವತಾರವೆತ್ತಿದ್ದಾರೆ. ರಿತ್ವಿಕ್ ಮಠದ್ ಹುಟ್ಟುಹಬ್ಬದ ವಿಶೇಷವಾಗಿ ಚಿತ್ರತಂಡ ಅವರ ಇಂಟ್ರಡಕ್ಷನ್ ಟೀಸರ್ ಅನಾವರಣ ಮಾಡಿದೆ. ಆದರೆ ಕಥೆಯ ಗುಟ್ಟನ್ನ ನಿರ್ದೇಶಕರರು ಬಿಟ್ಟುಕೊಟ್ಟಿಲ್ಲ. ಚರಣ್ ರಾಜ್ ಹಿನ್ನೆಲೆ ಸಂಗೀತ ಟೀಸರ್ ಹೈಲೆಟ್ಸ್. ಬೆಂಗಳೂರಿನ ಶೇರ್ಟನ್ ಹೋಟೆಲ್‌ನಲ್ಲಿ ಟೀಸರ್ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ನಟ ರಿಷಿ, ನಿರ್ದೇಶಕ ಸಿಂಪಲ್ ಸುನಿ, ಬಿಗ್ ಬಾಸ್ ಖ್ಯಾತಿಯ ಕಾರ್ತಿಕ್ ಮಹೇಶ್, ದಿವ್ಯ ಉರುಡುಗ ಮತ್ತು ಕೆಪಿ ಅರವಿಂದ್ ಕಾರ್ಯಕ್ರಮಕ್ಕೆ ಆಗಮಿಸಿದ್ದರು ಸಹ ನಿರ್ದೇಶಕ, ಸಹಾಯಕ ನಿರ್ದೇಶಕರಾಗಿ ದುಡಿದಿರುವ ರಿಶಿತ್ ಶೆಟ್ಟಿ ಈ ಚಿತ್ರಕ್ಕೆ ಚಿತ್ರಕತೆ ಹಾಗೂ ಸಂಭಾಷಣೆ ಬರೆದು ಮೊದಲ ಬಾರಿಗೆ ಪೂರ್ಣ ಪ್ರಮಾಣದ ನಿರ್ದೇಶಕರಾಗಿದ್ದಾರೆ.

# ತ್ರಿಶೂಲನ “ಲೈಫ್ ಈಸ್ ಜಿಂಗಾಲಾಲ”

ಎಚ್ ಪಿಆರ್ ಫಿಲ್ಮ್ ಪ್ರೊಡಕ್ಷನ್ ಲಾಂಛನದಲ್ಲಿ ತಯಾರಾಗುತ್ತಿರುವ “ಲೈಫ್ ಈಸ್ ಜಿಂಗಾಲಾಲ” ತುಳು ಸಿನಿಮಾದ ಮೊದಲ ಹಂತದ ಚಿತ್ರೀಕರಣ ಪೂರ್ಣಗೊಂಡಿದೆ. ಹರಿಪ್ರಸಾದ್ ರೈ ನಿರ್ಮಾಣದಲ್ಲಿ ತ್ರಿಶೂಲ್ ಶೆಟ್ಟಿ ನಿರ್ದೇಶನದಲ್ಲಿ ತಯಾರಾಗುತ್ತಿರುವ ಜಿಂಗಾಲಾಲ ಸಿನಿಮಾಕ್ಕೆ ಕರಾವಳಿ ಭಾಗದಲ್ಲಿ ಚಿತ್ರೀಕರಣಗೊಂಡಿದೆ. ಹರಿಪ್ರಸಾದ್ ರೈ ಮತ್ತು ತ್ರಿಶೂಲ್ ಶೆಟ್ಟಿ ಈ ಹಿಂದೆ ಪುಳಿ ಮುಂಚಿ ಎನ್ನುವ ಹಾಸ್ಯ ಸಿನಿಮಾವನ್ನು ನಿರ್ಮಿಸಿದ್ದರು. ಇದೀಗ ಇದೇ ಜೋಡಿ ಮತ್ತೊಂದು ಸಿನಿಮಾವನ್ನು ಮಾಡುತ್ತಿದ್ದಾರೆ. ಛಾಯಾಗ್ರಹಣ ಮಯೂರ್ ಆರ್ ಶೆಟ್ಟಿ, ಸಂಗೀತ ಕಿಶೋರ್ ಕುಮಾರ್ ಶೆಟ್ಟಿ, ಸಂಕಲನ ಗಣೇಶ್ ನೀರ್ಚಾಲ್, ಸಂಭಾಷಣೆ ಡಿಬಿಸಿ ಶೇಖರ್, ಸಾಹಿತ್ಯ ಮಯೂರ್ ಆರ್ ಶೆಟ್ಟಿ, ಕೀರ್ತನ್ ಭಂಡಾರಿ, ಕಲೆ ಹರೀಶ್ ನಾಯ್ಕ್ ಬಜಪೆ ಅವರದ್ದಾಗಿದೆ.



# ಹೊಸ ಅವತಾರದಲ್ಲಿ ನಂದಮೂರಿ ಬಾಲಕೃಷ್ಣ!

ಗಾಡ್ ಆಫ್ ಮಾಸ್ ನಂದಮೂರಿ ಬಾಲಕೃಷ್ಣ ಅವರ ಜನ್ಮದಿನಕ್ಕೆ ಅವರು ನಟಿಸುತ್ತಿರುವ ಸಿನಿಮಾದ ಅಖಂಡ–2 ಟೀಸರ್ ಬಿಡುಗಡೆ ಮಾಡಲಾಗಿದೆ. ನಂದಿ ಮುಖ ಇರುವ ತ್ರಿಶೂಲ ಹಿಡಿದು ಮಾಸ್ ಅವತಾರದಲ್ಲಿ ಬಾಲಯ್ಯ ಎಂಟ್ರಿ ಕೊಟ್ಟಿದ್ದಾರೆ. ಹಿಮದಿಂದ ಆವೃತವಾದ ಕೈಲಾಸಂ, ಭರ್ಜರಿ ಆಕ್ಷನ್ಸ್, ಎಸ್ ಥಮನ್ ಮ್ಯೂಸಿಕ್ ಅಖಂಡ–2 ಟೀಸರ್ ಹೈಲೆಟ್ಸ್. ಬಾಲಕೃಷ್ಣ ನಟನೆಯ ‘ಅಖಂಡ’ ಸಿನಿಮಾ 2021ರಲ್ಲಿ ಬಿಡುಗಡೆ ಆಗಿತ್ತು. ಈ ಚಿತ್ರದಲ್ಲಿ ಅಘೋರಿಯ ಪಾತ್ರದಲ್ಲಿ ನಟಿಸಿದ್ದರು. ಇದೀಗ ಅದೇ ಸಿನಿಮಾದ ಎರಡನೇ ಭಾಗವೇ ಅಖಂಡ 2. ‘ಅಖಂಡ’ ಸಿನಿಮಾ ನಿರ್ದೇಶನ ಮಾಡಿದ್ದ ಬೊಯಪಾಟಿ ಶ್ರೀನು ಅವರೇ ‘ಅಖಂಡ 2’ ಸಿನಿಮಾವನ್ನು ನಿರ್ದೇಶನ ಮಾಡಲಿದ್ದಾರೆ. ಬೊಯಪಾಟಿ ಶ್ರೀನು ಹಾಗೂ ಬಾಲಕೃಷ್ಣ ಕಾಂಬಿನೇಷನ್ನ ನಾಲ್ಕನೇ ಸಿನಿಮಾ ಇದಾಗಿದೆ. 14 ರೀಲ್ಸ್ ಪ್ಲಸ್ ಬ್ಯಾನರ್ ಅಡಿಯಲ್ಲಿ ಈ ಚಿತ್ರ ನಿರ್ಮಾಣವಾಗುತ್ತಿದೆ.



# ಡಾರ್ಲಿಂಗ್ ಕೃಷ್ಣ ಹುಟ್ಟುಹಬ್ಬಕ್ಕೆ “ಬ್ರ್ಯಾಟ್” ಟೀಸರ್..

“ಫಸ್ಟ್ ರ್‍ಯಾಂಕ್ ರಾಜು” ಚಿತ್ರದ ನಿರ್ಮಾಪಕ ಮಂಜುನಾಥ್ ಕಂದಕೂರ್ ಅವರು ಐದು ವರ್ಷಗಳ ನಂತರ ನಿರ್ಮಿಸುತ್ತಿರುವ ಹಾಗೂ ಶಶಾಂಕ್ ನಿರ್ದೇಶನದ ಹಾಗೂ ಡಾರ್ಲಿಂಗ್ ಕೃಷ್ಣ ನಾಯಕರಾಗಿ ನಟಿಸುತ್ತಿರುವ “ಬ್ರ್ಯಾಟ್”ಚಿತ್ರತಂಡ ಟೀಸರ್ ಬಿಡುಗಡೆ ಮಾಡಿದೆ. ಡಾರ್ಲಿಂಗ್ ಕೃಷ್ಣ ಅವರ ಹುಟ್ಟುಹಬ್ಬದ ಸಲುವಾಗಿ ಟೀಸರ್ ಬಿಡುಗಡೆ ಮಾಡಿರುವ ಚಿತ್ರತಂಡ ಆ ಮೂಲಕ ನಾಯಕನಿಗೆ ಹುಟ್ಟುಹಬ್ಬದ ಶುಭಾಶಯ ಹೇಳಿದೆ. ಈ ಚಿತ್ರದ ಚಿತ್ರೀಕರಣ ಬಹುತೇಕ ಮುಕ್ತಾಯವಾಗಿದೆ. ಡಾರ್ಲಿಂಗ್ ಕೃಷ್ಣ ಅವರಿಗೆ ನಾಯಕಿಯಾಗಿ ಮನಿಶಾ ಕಂದಕೂರ್ ಅಭಿನಯಿಸುತ್ತಿದ್ದಾರೆ. ರಮೇಶ್ ಇಂದಿರಾ, ಡ್ರ್ಯಾಗನ್ ಮಂಜು ಮುಂತಾದವರ ತಾರಾಬಳಗವಿರುವ ಈ ಚಿತ್ರಕ್ಕೆ ಅರ್ಜುನ್ ಜನ್ಯ ಸಂಗೀತ ನಿರ್ದೇಶನ ಹಾಗೂ ಅಭಿಲಾಶ್ ಕಲ್ಲತ್ತಿ ಛಾಯಾಗ್ರಹಣವಿದೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212